BV

# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ
01 ಮೇ । ಬುಧವಾರ
01 MAY 2024

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 63 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26


# ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಗೆದ್ದರೆ ನನಗೆ ಶಕ್ತಿ ಬಂದಂತೆ : ಸಿಎಂ ಸಿದ್ದರಾಮಯ್ಯ

## ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ರಚನೆ ಗ್ಯಾರಂಟಿ

ಗೋಕಾಕ್: ಲೋಕಸಭಾ ಚುನಾವಣೆಯಲ್ಲಿ ಸೋಲಿನ ಭೀತಿಯಿಂದಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಸರಣಿ ಸುಳ್ಳುಗಳನ್ನು ಹೇಳುತ್ತಿದ್ದಾರೆ. ಕಳೆದ 10 ವರ್ಷಗಳಿಂದ ಕೊಟ್ಟ ಭರವಸೆಗಳನ್ನು ಈಡೇರಿಸದ ಮೋದಿ, ಇದೀಗ ಚುನಾವಣೆ ವೇಳೆ ಹೊಸ ಹೊಸ ಸುಳ್ಳುಗಳನ್ನು ಸೃಷ್ಟಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಜೆಪಿ ನಾಯಕರ ವಿರುದ್ಧ ಆರೋಪಗಳ ಸು–ರಿಮಳೆಗೈದರು.

ಗೋಕಾಕ್ ನ ವಾಲ್ಮೀಕಿ ಮೈದಾನದಲ್ಲಿ ಮಂಗಳವಾರ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಪರ ಚುನಾವಣಾ ಪ್ರಚಾರಾರ್ಥ ನಡೆದ ಪ್ರಜಾಧ್ವನಿ–2 ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು.

ಈ ಚುನಾವಣೆಯಲ್ಲಿ ನೀವು ಕೊಡುವ ತೀಪು, ದೇಶದ ಭವಿಷ್ಯವನ್ನು ಬದಲಿಸುವ ತೀಪು. ಕೇಂದ್ರ ಕೊಟ್ಟ ಭರವಸೆಗಳಲ್ಲಿ ಎಷ್ಟು ಈಡೇರಿವೆ? ದೇಶದ ಜನ–ರಿಗೆ ಮೋದಿ ಸರಣಿ ಸುಳ್ಳು ಗಳನ್ನು ಹೇಳುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಆರೋಪಿಸಿದರು.

2013ರಲ್ಲಿ ನಾವು ಅಧಿಕಾರಕ್ಕೆ ಬಂದಾಗ ಜನಸಾಮಾನ್ಯರ ಬೇಡಿಕೆಗಳನ್ನು ಈಡೇರಿಸಲು ಪ್ರಯತ್ನ ಮಾಡಿದೆವು. ಪ್ರಧಾನಿ ಮನಮೋಹನ್ ಸಿಂಗ್ ಕಾಲದಲ್ಲಿ ಆಹಾರ ರಕ್ಷಣಾ ಕಾಯ್ದೆಯನ್ನು ಜಾರಿಗೊಳಿಸಲಾಯಿತು. ಆದ–'ರೆ, ಇದರ ಕ್ರೆಡಿಟ್ ಪಡೆಯಲು ಮೋದಿ ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಿದರು.

ವಿದೇಶದಲ್ಲಿರುವ ಕಪ್ಪು ಹಣ ತಂದು, ಎಲ್ಲರ ಅಕೌಂಟ್ ಗೆ 15 ಲಕ್ಷ ರೂಪಾಯಿ ಹಾಕಲಾಗುವುದು ಎಂದರು. 10 ವರ್ಷ ಆದರೂ ಒಂದು ಪೈಸೆ ಬರಲಿಲ್ಲ. ವರ್ಷಕ್ಕೆ ಎರಡು ಕೋಟಿ ಉದ್ಯೋಗ ಕೊಡಲಿಲ್ಲ. ಕನಿಷ್ಟ 20 ಲಕ್ಷ ಉದ್ಯೋಗ ಕೊಡಲಿಲ್ಲ. ಬದಲಿಗೆ ನಿರುದ್ಯೋಗಿಗಳ ಸಂಖ್ಯೆ ಜಾಸ್ತಿ ಆಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದರು.

ಹಿಂದಿನ ಚುನಾವಣೆಯಲ್ಲಿ



ಆರ್ಟಿಕಲ್ 370, ಪುಲ್ವಾಮ ದಾಳಿ, ಸರಣಿ ಸುಳ್ಳುಗಳನ್ನು ಮುಂದಿಟ್ಟುಕೊಂಡು ಬಿಜೆಪಿಯವರು ಅಧಿಕಾರಕ್ಕೇರಿದ್ದರು.

ಇದೀಗ ಮತ್ತೆ ಮೋದಿ ಹತಾಶೆಯಿಂದ ಸುಳ್ಳು ಹೇಳಲು ಶುರುಮಾಡಿದ್ದಾರೆ. ಮೋದಿ ನೇತೃತ್ವದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ ಎಂದು ಹೇಳಿದರು.

ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಕಿತ್ತು ಮುಸ್ಲಿಮರಿಗೆ ಕೊಡುತ್ತಾರೆ ಎಂದು ಮೋದಿ ಸುಳ್ಳು ಹೇಳಲು ಶುರು ಮಾಡಿದ್ದಾರೆ. ಕರ್ನಾಟಕದ ಬಗ್ಗೆ ಅನೇಕ ಸುಳ್ಳುಗಳನ್ನು ಹೇಳುತ್ತಿದ್ದಾರೆ.

ಅಧಿಕಾರಿಗಳಿಗೆ ಸಂಬಳ ಕೊಡಲು ಹಣ ಇಲ್ಲ. ಎಂದು ಸುಳ್ಳು ಹೇಳಲಾಗ್ತಿದೆ. ನಾವು ಅಧಿಕಾರಕ್ಕೆ ಬಂದಾಗ ಯಾರಿಗೂ ಸಂಬಳವೇ ಆಗಿರಲಿಲ್ಲ, ಎಲ್ಲರಿಗೂ ಸಂಬಳ ಮಾಡಿ, ನಂತರ ಕೂಡ ಅಭಿವೃದ್ಧಿ ಕಾರ್ಯಗಳನ್ನು ನಿಲ್ಲಿಸಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ. ಗೃಹ ಜ್ಯೋತಿ, ಗೃಹಲಕ್ಷ್ಮಿ, ಶಕ್ತಿ ಯೋಜನೆಗಳಿಂದ ಮಹಿಳೆಯರಿಗೆ ಸಬಲೀಕರಣ–ಕ್ಕೆ ಅನುಕೂಲವಾಗಿದೆ. ಕರ್ನಾಟಕ, ತೆಲಂಗಾಣದಲ್ಲಿ ಗ್ಯಾರಂಟಿ ಯೋಜನೆಗಳು ಜಾರಿಗೆ ಬಂದ ಮೇಲೆ ಕಾಂಗ್ರೆಸ್ ಪಕ್ಷದ ಮೇಲೆ ಜನರಿಗೆ ನಂಬಿಕೆ ಬಂದಿದೆ. ಕೇಂದ್ರದಲ್ಲಿ ನಮ್ಮ ಸರ್ಕಾರ ಬಂದರೆ ಮಹಾಲಕ್ಷ್ಮಿ ಯೋಜನೆಯಡಿ ಒಂದು ಕುಟುಂಬಕ್ಕೆ ಒಂದು ಲಕ್ಷ ರೂಪಾಯಿ ನೀಡಲಾಗುವುದು ಎಂದರು.

**ಮೃಣಾಲ್ ಅಲ್ಲ, ನಾನೇ ಅಭ್ಯರ್ಥಿ:** ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ನೀಡಿದರೆ ನನಗೆ ಆಶೀರ್ವಾದ ಮಾಡಿದಂತೆ ಆಗುತ್ತೆ. ಈ ಕ್ಷೇತ್ರದ ಅಭ್ಯರ್ಥಿ ನಾನೇ, ಲಕ್ಷ್ಮೀ ಹೆಬ್ಬಾಳಕರ್ ಮಗ ಅಲ್ಲ. ಕಾಂಗ್ರೆಸ್ ಅಭ್ಯರ್ಥಿ ಗೆದ್ದರೆ ನನಗೆ ಶಕ್ತಿ ಬಂದಂತೆ ಆಗುತ್ತದೆ. ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ ಮಾಡಿದರು.

ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಡಾ.ಎಂ.ಸಿ.ಸುಧಾಕರ್, ಮಾಜಿ ಉಪ ಮುಖ್ಯಮಂತ್ರಿ ಹಾಗೂ ಶಾಸಕರಾದ ಲಕ್ಷ್ಮಣ್ ಸವದಿ, ಭದ್ರಾವತಿ ಶಾಸಕರಾದ ಬಿ.ಕೆ.ಸಂಗಮೇಶ್, ಪುಟ್ಟ ರಂಗಶೆಟ್ಟಿ, ರಾಜು ಸೇಠ್, ನಯನಾ ಮೋಟಮ್ಮ, ಕೇರಳ ಶಾಸಕ ರೋಜಿ ಜಾನ್, ವಿಧಾನ ಪರಿಷತ್ ಸದಸ್ಯರಾದ ನಾಗರಾಜ್ ಯಾದವ್, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ, ಭೋವಿ ನಿಗಮದ ಅಧ್ಯಕ್ಷರಾದ ಪ್ರವೀಣ್ ಕುಮಾರ್, ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಿನಯ್ ನಾವಲಗಟ್ಟಿ, ಮುಖಂಡರಾದ ಡಾ.ಮಹಾಂತೇಶ್ ಕಡಾಡಿ, ಮೋಹನ್ ಲಿಂಬಿಕಾಯಿ, ಅಶೋಕ್ ಪೂಜಾರಿ, ಸಿದ್ದಲಿಂಗ ದಳವಾಯಿ, ಅರವಿಂದ ದಳವಾಯಿ, ಚಂದ್ರಶೇಖರ್ ಕೊಣ್ಣೂರ, ಲಕ್ಕಣ್ಣ ಸವಸುದ್ದಿ, ಪ್ರೇಮಾ ಚಿಕ್ಕೋಡಿ, ಬಸವನಗೌಡ ಹೊಳಿಯಾಚೆ, ಪ್ರಕಾಶ್ ಢಾಗೆ, ಜಾರಿಕ್ ನದಾಫ್, ಗಂಗಾಧರ ಬಡಕುಂದ್ರಿ, ಭೀಮಪ್ಪ ಹಂದಿಗುಂದ್, ರಮೇಶ್ ಉಟಗಿ, ಸುರೇಶ್ ಅರಳಿ, ಲಗಮಣ್ಣ ಕಳಸನ್ನವರ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.



## ಪೆನ್‌ಡ್ರೈವ್ ಹಿಂದೆ ಮಹಾನಾಯಕ ಇದ್ದಾರೆ: ಹೆಚ್ಡಿಕೆ ಕಿಡಿ

ಹುಬ್ಬಳ್ಳಿ: ಸಂಸದ ಪ್ರಜ್ವಲ್ ರೇವಣ್ಣ ಪೆನ್ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿಸಿಎಂ ಡಿ.ಕೆ ಶಿವಕುಮಾರ್ ವಿರುದ್ಧ ಮಾಜಿ ಸಿಎಂ ಕುಮಾರಸ್ವಾಮಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೆನ್ಡ್ರೈವ್ ಕೇಸ್ ಹಿಂದೆ ಮಹಾನಾಯಕ ಇದ್ದಾರೆ. ಆ ಮಹಾ ನಾಯಕನನ್ನು ಭೇಟಿ ಮಾಡಿದ್ಯಾರು? ಈ ಪ್ರಕರಣದ ವಿರುದ್ಧ ಕಾಂಗ್ರೆಸ್ ಮಹಾನಾಯಕರು ಪ್ರತಿಭಟನೆ ಮಾಡಿಸಿದ್ರು, ಇದನ್ನು ಇಷ್ಟಕ್ಕೆ ಬಿಡುವುದಿಲ್ಲ ಎಂದು ಅವರು ಕೆಂಡಾಮಂಡಲರಾಗಿದ್ದಾರೆ.

ನಾವು ಯಾರನ್ನೂ ರಕ್ಷಿಸುವ ಕೆಲಸ ಮಾಡುವುದಿಲ್ಲ. ಈ ವಿಚಾರವಾಗಿ ಕಠಿಣ ಕ್ರಮ ಕೈಗೊಳ್ಳುತ್ತೇವೆ. ಈ ಮಾತನ್ನು ಚಿಕ್ಕಪ್ಪನಾಗಿ ಹೇಳುತ್ತಿಲ್ಲ. ಸಾಮಾನ್ಯ ವ್ಯಕ್ತಿಯಾಗಿ ಹೇಳುತ್ತಿದ್ದೇನೆ. ಇದು ನಾಚಿಕೆಗೇಡಿನ ವಿಷಯ. ಉಪ್ಪು ತಿಂದವರು ನೀರು ಕುಡಿಯಲೇಬೇಕು ಎಂದು ಅವರು ಕಿಡಿಕಾರಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ಸರ್ಕಾರ, ಬೆಂಗಳೂರಿನ ಎಡಿಜಿಪಿ ಬಿಜಯಕುಮಾರ್ ಸಿಂಗ್ ನೇತೃತ್ವದಲ್ಲಿ, ಸಹಾಯಕ ಪೊಲೀಸ್ ಮಹಾ ನಿರೀಕ್ಷಕರಾದ ಸುಮನ್ ಡಿ. ಪನ್ನೇಕರ್ ಹಾಗೂ ಮೈಸೂರು ಎಸ್ಪಿ ಸೀಮಾ ಲಾಟ್ಕರ್ ಅವರನ್ನೊಳಗೊಂಡ ವಿಶೇಷ ತನಿಖಾ ತಂಡವನ್ನು ರಚಿಸಿದೆ. ಈ ಸಂಬಂಧ ಎಸ್ಐಟಿ ತನಿಖೆ ನಡೆಸುತ್ತಿದೆ.



## ಮಹಿಳೆಯರ ಮೇಲಿನ ದೌರ್ಜನ್ಯ ಸಹಿಸಲ್ಲ: ಅಮಿತ್ ಶಾ


ಬಿಹಾರ್: ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳಕ್ಕೆ ಸಂಬಂಧಿಸಿದಂತೆ ವಿವಾದದಲ್ಲಿ ಸಿಲುಕಿರುವ ಸಂಸದ ಪ್ರಜ್ವಲ್ ರೇವಣ್ಣ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಪ್ರತಿಕ್ರಿಯೆ ನೀಡಿದ್ದಾರೆ.

ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು, ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರವಿದೆ, ಅವರು ಇನ್ನೂ ಏಕೆ ಕ್ರಮ ಕೈಗೊಂಡಿಲ್ಲ? ಜೆಡಿಎಸ್ ಕೂಡ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದೆ.

ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಮಹಿಳೆಯರನ್ನು ಅವಮಾನಿಸಬಾರದು. ಇದನ್ನು ನಾವು ಬಲವಾಗಿ ಖಂಡಿಸುತ್ತೇವೆ ಎಂದರು.

ನಾವು ದೇಶದ ಮಾತೃಶಕ್ತಿಯೊಂದಿಗಿದ್ದೇವೆ, ಮಹಿಳಾ ಶಕ್ತಿಯೊಂದಿಗೆ ನಿಲ್ಲುತ್ತೇವೆ ಎಂಬುದು ಭಾರತೀಯ ಜನತಾ ಪಕ್ಷದ ನಿಲುವು ಸ್ಪಷ್ಟವಾಗಿದೆ.

ಮಾತೃಶಕ್ತಿಗೆ ಮಾಡಿದ ಅವಮಾನವನ್ನು ಎಂದೂ ಸಹಿಸುವುದಿಲ್ಲ ಎಂಬ ಬದ್ಧತೆಯನ್ನು ನರೇಂದ್ರ ಮೋದಿಯವರು ಹೊಂದಿದ್ದಾರೆ. ಮೊದಲು ಈ ಬಗ್ಗೆ ಕ್ರಮ ಕೈಗೊಳ್ಳಿ, ಮಹಿಳೆಯರ ಅವಮಾನ ತಡೆಯುವುದಿಲ್ಲ ಎಂದು ಹೇಳಿದ್ದಾರೆ.



## ಕಂದಕಕ್ಕೆ ಉರುಳಿ ಬಿದ್ದ ಶಾಸಕ ಬೈರತಿ ಬಸವರಾಜ್ ಕಾರು

ಯಾದಗಿರಿ: ಸುರಪುರ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಾಜೂಗೌಡ ಪರವಾಗಿ ಪ್ರಚಾರಕ್ಕೆ ತೆರಳಿದ್ದ ಶಾಸಕ ಬೈರತಿ ಬಸವರಾಜ್ ಕಾರು ಅಪಘಾತಕ್ಕೀಡಾಗಿದ್ದು, ಕಾರು ಚಾಲಕ ಹಾಗೂ ಗನ್ ಮ್ಯಾನ್ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ಕಾಮನಟಗಿ ಗ್ರಾಮದ ಎರೆ ಕೆನಾಲ್ ಬಳಿ ಈ ಘಟನೆ ನಡೆದಿದೆ. ಈ ವೇಳೆ ಕಾರಿನಲ್ಲಿ ಬೈರತಿ ಬಸವರಾಜ್ ಇರಲಿಲ್ಲ. ಅವರು ಬೇರೆಯವರ ಕಾರಿನಲ್ಲಿ ತೆರಳುತ್ತಿದ್ದರು ಎಂದು ತಿಳಿದು ಬಂದಿದೆ.

ಆ ಕಾರನ್ನು ಹಿಂದೆ ಅಪಘಾತಕ್ಕೀಡಾದ ಕಾರು ಚಲಿಸುತ್ತಿತ್ತು. ಈ ವೇಳೆ ಕಾರು ರಸ್ತೆಯ ಪಕ್ಕದಲ್ಲಿದ್ದ ಕಂದಕಕ್ಕೆ ಉರುಳಿ ಬಿದ್ದಿದೆ.

ಅಪಘಾತದಲ್ಲಿ ಕಾರು ಚಾಲಕ ಹಾಗೂ ಗನ್ ಮ್ಯಾನ್ಗೆ ಸಣ್ಣಪುಟ್ಟ ಗಾಯಗಳಾಗಿವೆ. ಅವರನ್ನು ಹುಣಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಸ್ಥಳಕ್ಕೆ ಹುಣಸಗಿ ಠಾಣೆ ಪಿಎಸ್ಐ ಸಂಗೀತಾ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಮತ್ತೆ ರಾಯಣ್ಣ ಬ್ರಿಗೇಡ್ ಆರಂಭಿಸುವ ಸುಳಿವು ನೀಡಿದ ಈಶ್ವರಪ್ಪ



ಶಿವಮೊಗ್ಗ: ಹಿಂದುಳಿದವರಿಗೆ, ಅತಿ ಹಿಂದುಳಿದವರಿಗೆ ನ್ಯಾಯ ಸಿಗಬೇಕು ಅಂತ ಸಂಗೊಳ್ಳಿ ರಾಯಣ್ಣ ಬ್ರಿಗೇಡ್ ಪ್ರಾರಂಭಿಸಿದ್ದೆ. ಸಂಗೊಳ್ಳಿ ರಾಯಣ್ಣ ಬ್ರಿಗೇಡ್ ನಿಲ್ಲಿಸಬೇಕು ಅಂತ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಮತ್ತು ಕೇಂದ್ರ ಸಚಿವ ಅಮಿತ್ ಶಾ ಹೇಳಿದರು. ಮರು ಮಾತನಾಡದೆ ನಿಲ್ಲಿಸಿದೆ. ಆ ಸಂಘಟನೆ ಈಗ ಇದ್ದಿದ್ದರೆ ಹಿಂದುಳಿದವರಿಗೆ ನ್ಯಾಯ ಸಿಗುತ್ತಿತ್ತೇನೋ. ನಾನು ಯಾವಾಗಲೂ ಹಿರಿಯರ ಮಾತು ಮೀರಿರಲಿಲ್ಲ ಹೀಗಾಗಿ ಕೈಬಿಟ್ಟೆ. ನಾನು ಆವಾಗಲೇ ಅವರ ಮಾತು ಮೀರಿದ್ದರೆ ಸರಿ ಹೋಗುತಿತ್ತು. ಚುನಾವಣೆ ಮುಗಿದ ನಂತರ ಹಿಂದುಳಿದವರ, ದಲಿತರ ರಾಜ್ಯ ಮಟ್ಟದ ಸಭೆ ಕರೆಯುತ್ತೇನೆ ಎಂದು ಮಾಜಿ ಸಚಿವ, ಶಿವಮೊಗ್ಗ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಕೆಎಸ್ ಈಶ್ವರಪ್ಪ ಹೇಳಿದರು.

ಶಿವಮೊಗ್ಗದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಹಿಂದುಳಿದವ–ರಿಗೆ, ದಲಿತರಿಗೆ ನ್ಯಾಯ ಕೊಡಿಸುವ ಕೆಲಸ ಮಾಡುತ್ತೇನೆ. ಬಿಜೆಪಿ ನನ್ನ ಮಾತೃ ಸಂಸ್ಥೆ, ಈ ಚುನಾವಣೆಯಲ್ಲಿ ಗೆದ್ದು ಮತ್ತೆ ಬಿಜೆಪಿಗೆ ಹೋಗುತ್ತೇನೆ. ಕ್ಷೇತ್ರದಲ್ಲಿ ನನಗೆ ದಿನದಿಂದ ದಿನಕ್ಕೆ ಬೆಂಬಲ ಹೆಚ್ಚಾಗುತ್ತಿದೆ. ಜನ ನಿರೀಕ್ಷೆಗೆ ಮೀರಿ ಬೆಂಬಲ ಕೊಡುತ್ತಿದ್ದಾರೆ ಎಂದು ತಿಳಿಸಿದರು. ಬಗರ್ ಹುಕಂ ಜಮೀನು ಸಮಸ್ಯೆ ಇನ್ನೂ ಹಾಗೆ ಇದೆ. ಸಾವಿರಾರು ಸಂತ್ರಸ್ತರಿಗೆ ಈವರೆಗೂ ಹಕ್ಕುಪತ್ರ ಸಿಕ್ಕಿಲ್ಲ. ಮಲೆನಾಡು ರೈತ ಹೋರಾಟ ಸಮಿತಿ ನನಗೆ ಬೆಂಬಲ ನೀಡಿದೆ. ಇವರ ಹೋರಾಟಕ್ಕೆ ನಾನು ಸಹ ಸಾಥ್ ನೀಡುತ್ತೇನೆ. ಚುನಾವಣೆ ಬಳಿಕವೂ ನನ್ನ ಹೋರಾಟ ಮುಂದುವ–ರಿಯುತ್ತೆ. ಚುನಾವಣೆ ಬಳಿಕ ರಾಜ್ಯಮಟ್ಟದ ಸಭೆ ಮಾಡುತ್ತೇನೆ ಎಂದರು. ಸಂಗೊಳ್ಳಿ ರಾಯಣ್ಣ ಬ್ರಿಗೇಡ್: ಪಕ್ಷ ರಾಜಕಾರಣದಲ್ಲಿ ಅವರ ಅಸ್ತಿತ್ವ ಅಲುಗಾಡಿದಾಗ, ಬಿಜೆಪಿಗೆ ಹಿಂದುಳಿದ ವರ್ಗಗಳ ನಾಯಕರೊಬ್ಬರ ಅಗತ್ಯ ಉದ್ಭವಿಸಿದಾಗ, ಕಾಂಗ್ರೆಸ್ನ ಹಿಂದುಳಿದ ವರ್ಗಗಳ, ಮುಖ್ಯವಾಗಿ ಕುರುಬ ಸಮುದಾಯದ ಸಿದ್ದರಾಮಯ್ಯನವರಿಗೆ ಪರ್ಯಾಯ ನಾಯಕತ್ವಕ್ಕಾಗಿ ಈಶ್ವರಪ್ಪ ಕಂಡುಕೊಂಡ ದಾರಿ ರಾಯಣ್ಣ ಬ್ರಿಗೇಡ್. 2016ರ ಡಿಸೆಂಬರ್ನಲ್ಲಿ ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ನಂದಗಡದಲ್ಲಿ ಮಾಜಿ ಸಚಿವ ಈಶ್ವರಪ್ಪ ಸಂಗೊಳ್ಳಿ ರಾಯಣ್ಣ ಬ್ರಿಗೇಡ್ ಆರಂಭಿಸಿದರು. 2018ರ ವಿಧಾನಸಭೆ ಚುನಾವಣೆಗೂ ಮುಂಚೆ ರಾಯಣ್ಣ ಬ್ರಿಗೇಡ್ ಆಂಭವಾಗಿದ್ದು, ಬಿಜೆಪಿಗೆ ಮಗ್ಗಲು ಮುಳ್ಳಾಗಿತ್ತು. ಈಗ ಮತ್ತೆ ಈಶ್ವರಪ್ಪನವರ ರಾಜಕೀಯ ಭವಿಷ್ಯ ಡೋಲಾಯಮಾನವಾಗಿರುವ ಸಂದರ್ಭದಲ್ಲಿ ಮತ್ತೆ ರಾಯಣ್ಣನ ಮೊರೆ ಹೋಗಿದ್ದಾರೆ. ಹೀಗಾಗಿ ಈಶ್ವರಪ್ಪ ಅವರು ರಾಯಣ್ಣ ಬ್ರಿಗೇಡ್ಗೆ ಮರುಜೀವ ನೀಡಲು ಯತ್ನಿಸುತ್ತಿದ್ದಾರೆ.

## ನೀಚ ವ್ಯಕ್ತಿ ಪ್ರಜ್ವಲ್ ರನ್ನು ಗೆಲ್ಲಿಸಬೇಕಾ: ನಟಿ ಪೂನಂ ಕೌರ್ ಆಕ್ರೋಶ

ಬೆಂಗಳೂರು: ಕನ್ನಡ ಚಿತ್ರ ಸೇರಿದಂತೆ ವಿವಿಧ ಭಾಷೆಗಳ ಚಿತ್ರಗಳಲ್ಲಿ ನಟಿಸಿರುವ ಪೂನಂ ಕೌರ್ ಎಲ್ಲರ ಗಮನ ಸೆಳೆದಿದ್ದಾರೆ. ಪ್ರಜ್ವಲ್ ರೇವಣ್ಣರಂಥ ನೀಚ ವ್ಯಕ್ತಿಗಳನ್ನು ಗೆಲ್ಲಿಸಬೇಕಾ ಎಂದು ಪ್ರಶ್ನೆ ಮಾಡಿದ್ದಾರೆ. ದೇಶದಾದ್ಯಂತ ಪ್ರಜ್ವಲ್ ಅವರ ವಿಡಿಯೋಗಳು ಹರಿದಾಡುತ್ತಿವೆ. ಈ ಸಂದರ್ಭದಲ್ಲಿ ಪೂನಂ ಹೇಳಿಕೆ ಮಹತ್ವ ಪಡೆದುಕೊಂಡಿದೆ. ಈತ ಮಹಿಳೆಯರಿಗೆ ಬೆದರಿಸಿ ಲೈಂಗಿಕ ದೌರ್ಜನ್ಯ ನಡೆಸುತ್ತಿದ್ದ ಎನ್ನಲಾಗಿದೆ. ಸಾವಿರಾರು ವಿಡಿಯೋಗಳು ಶೇರ್ ಆಗುತ್ತಿವೆ. ಹಣ ಮತ್ತು ರಾಜಕೀಯದ ಕಾರಣದಿಂದ ಅವರು ಓಡಿಹೋದರು. ಪ್ರಜ್ವಲ್ ಜರ್ಮನಿಯಲ್ಲಿ ಖುಷಿಯಾಗಿದ್ದಾರೆ. ಇವರಿಗೆ ಶಿಕ್ಷೆ ಆಗಬೇಕು.

## ಮೋದಿಯವರು ಭಾರತ ಅಷ್ಟೇ ಅಲ್ಲದೆ ವಿಶ್ವಾನಾಯಕ: ಶಾಸಕ ರಮೇಶ ಜಾರಕಿಹೊಳಿ

ಬೆಳಗಾವಿ: ನರೇಂದ್ರ ಮೋದಿಯವರು ಪ್ರಧಾನಿ ಆದ ನಂತರ ನಮಗೆ ಹೆಮ್ಮೆ ಅನಿಸುತ್ತದೆ. ಈ ಹಿಂದೆ ಬಹಳಷ್ಟು ಪ್ರಧಾನಿಗಳನ್ನು ನೋಡಿದ್ದೇನೆ. ಇಂದಿರಾಗಾಂಧಿ ನಂತರ ಗಟ್ಟಿಯಾದ ಪ್ರಧಾನಿ ಅಂದರೆ ಅದು ನರೇಂದ್ರ ಮೋದಿಯವರು. ಪ್ರಧಾನಿ ನರೇಂದ್ರ ಮೋದಿಯವರು ಭಾರತದ ನಾಯಕರು ಅಷ್ಟೇ ಅಲ್ಲ ವಿಶ್ವಾನಾಯಕರಾಗಿ ಬೆಳೆದು ನಿಂತಿ–ದ್ದಾರೆ ಎಂದು ಶಾಸಕ ರಮೇಶ ಜಾರಕಿಹೊಳಿ ಅವರು ತಿಳಿಸಿದ್ದಾರೆ.

ಸೋಮಾವಾರ ರಾತ್ರಿ ಗೋಕಾಕ್ ಪಟ್ಟಣದಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರ ಪರವಾಗಿ ಆಯೋಜನೆ ಮಾಡಲಾಗಿದ್ದ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಈ ಚುನಾವಣೆ ಭಾರತದ ಭದ್ರತೆ, ಆರ್ಥಿಕ ಭದ್ರತೆಗಾಗಿ ನಡೆಯುವ ಚುನಾವಣೆ ಆಗಿದೆ. ಕಳೆದ 10 ವರ್ಷದಿಂದ ನರೇಂದ್ರ ಮೋದಿಯವರು ಉತ್ತಮ ಆಡಳಿತ ನೀಡಿದ್ದಾರೆ. ಭಾರತಕ್ಕಾಗಿ ಹಗಲಿರಳು ದುಡಿಯುವ ನಾಯಕ ಅಂದರೆ ಅದು ನರೇಂದ್ರ ಮೋದಿಯವರು.



ತಮ್ಮ ತಾಯಿ ನಿಧನರಾದ ನಂತರವೂ ಒಂದೆ ಒಂದು ದಿನ ರಜೆ ತಗೆದುಕೊಳ್ಳದೆ, ತಾಯಿಯ ಅಂತಮ ಸಂಸ್ಕಾರ ಮಾಡಿ, ಅಂದೆ ಪಶ್ಚಿಮ ಬಂಗಾಳದಲ್ಲಿ ಕಾರ್ಯಕ್ರಮದಲ್ಲಿ ಭಾಗಿ ಆದ–'ರು. ಅಂತಹ ಆದರ್ಶ ವ್ಯಕ್ತಿ ನಮ್ಮ ಪ್ರಧಾನಿ ಆಗಿದ್ದಾರೆ ಎಂದರೆ ನಾವು ಹೆಮ್ಮೆ ಪಡಬೇಕು. ಒಬ್ಬ ಸಾಮಾನ್ಯ ವ್ಯಕ್ತಿ ಪ್ರಧಾನಿ ಆಗಿದ್ದಾರೆ ಎಂದರೆ ಅವರು ದೇವತಾ ಮನುಷ್ಯ. ಸತತ 13 ದಿನಗಳ ಕಾಲ ಉಪಾವಸ ವೃತ ಮಾಡಿ, ರಾಮ ಮಂದಿರ ಉದ್ಘಾಟನೆಯಲ್ಲಿ ಭಾಗಿ ಆದರು. ನರೇಂದ್ರ ಮೋದಿಯವರು ರಾಮ ಮಂದಿರ ಉದ್ಘಾಟನೆ ಸಂದರ್ಭದಲ್ಲಿ ರಾಮ ಸೇತುವೆಗೆ ಹೋಗಿ ಪೂಜೆ ಸಲ್ಲಿಸಿದರು. ತಮ್ಮ ವೋಟ್ ಬ್ಯಾಂಕ್ ಗಾಗಿ ಕಾಂಗ್ರೆಸ್ ರಾಮ ಮಂದಿರಕ್ಕೆ ಹೊಗುವದನ್ನು ಬಹಿಷ್ಕಾರ ಮಾಡಿದರು ಎಂದು ರಮೇಶ್ ಜಾರಕಿಹೊಳಿ ಅವರು ತಿಳಿಸಿದರು.

ಈ ವೇಳೆ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್, ಮಾಜಿ ಶಾಸಕ ಎಂ ಎಲ್ ಮುತ್ತೇಣ್ಣವರ, ಬಿಜೆಪಿ ಗ್ರಾಮೀಣ ಜಿಲ್ಲಾದ್ಯಕ್ಷ ಶುಭಾಸ ಪಾಟೀಲ್ ಅಶೋಕ ಪಾಟೀಲ್, ರಾಮದುರ್ಗ ಬಿಜೆಪಿ, ಮುಖಂಡ ಚಿಕ್ಕರೇವಣ್ಣ, ಕೆ ವಿ ಪಾಟೀಲ್, ನಗರ ಮಂಡಳ ಅಧ್ಯಕ್ಷ ಭೀಮಶಿ ಭರಮಣ್ಣವರ, ದಯಾನಂದ ಮುನ್ನವಳ್ಳಿ ಸೇ–ರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ದೇಶದ ಸುರಕ್ಷತೆಗೆ ನರೇಂದ್ರ ಮೋದಿ ಬಹಳ ಮುಖ್ಯ: ಜಗದೀಶ್ ಶೆಟ್ಟರ್

ಬೆಳಗಾವಿ: ಭಾರತ ದೇಶವನ್ನು ಸೂಪರ್ ಪಾವರ್ ಮಾಡಲು ಹಾಗೂ ದೇಶದ ಸುರಕ್ಷತೆಗೆ ನರೇಂದ್ರ ಮೋದಿಯವರು ಮತ್ತೆ ಪ್ರಧಾನಿ ಆಗುವುದು ಬಹಳ ಮುಖ್ಯ ಇದೆ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ತಿಳಿಸಿದರು.

ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿಯ ಅಂಗಡಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಆ್ಯಂಡ್ ಮ್ಯಾನೇಜ್‌ಮೆಂಟ್ ಕಾಲೇಜಿನ ಸಭಾ ಭವನದಲ್ಲಿ, ಕಾಲೇಜಿನ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಮಾತನಾಡಿದ ಅವರು, ಒಂದು ದೇಶದ ಪ್ರಗತಿಗೆ ಆ ದೇಶದ ಆರ್ಥಿಕತೆ ಬಹಳ ಮುಖ್ಯ ಆಗುತ್ತದೆ. ಅಮೇರಿಕಾ ಸೇ–ರಿದಂತೆ ಬೇರೆ ಬೇರೆ ದೇಶಗಳು ಆರ್ಥಿಕ ಪ್ರಗತಿ ಹೊಂದಿದರಿಂದ ಆ ದೇಶಗಳಿಗೆ ಉನ್ನತ ಸ್ಥಾನ ಇದೆ. ಪ್ರಧಾನಿ ಮೋದಿಯವರು ದೇಶದಲ್ಲಿ ಉತ್ತಮವಾದ ಆರ್ಥಿಕ ನೀತಿ ಜಾರಿಗೆ ತಂದು ದೇಶವನ್ನು ಅಭಿವೃದ್ಧಿ ಮಾಡಿದರು. ಅಕ್ಕಪಕ್ಕದ ರಾಷ್ಟ್ರಗಳು ಆರ್ಥಿಕವಾಗಿ ದಿವಾಳಿ ಆಗಿದೆ. ಆದರೆ ಭಾರತ ಆರ್ಥಿಕವಾಗಿ ಬೆಳೆದಿದೆ ಎಂದರೆ ಅದಕ್ಕೆ ಮೋದಿಯವರು ಕಾರಣ ಎಂದು ತಿಳಿಸಿದರು.

ಮೋದಿಯವರು 2014 ರಲ್ಲಿ ಪ್ರಧಾನಿ ಆದಾಗ ಭಾರತದ ಆರ್ಥಿಕವಾಗಿ 14 ನೆ ಸ್ಥಾನದಲ್ಲಿ ಇತ್ತು ಆದರೆ ಕೇವಲ 10 ವರ್ಷದಲ್ಲಿ ದೇಶದ ಆರ್ಥಿಕತೆ 5 ನೇ ಸ್ಥಾನಕ್ಕೆ ತಂದಿದ್ದಾರೆ. ಮೋದಿಯವರು ಮತ್ತೆ ಪ್ರಧಾನಿಯಾದರೆ ದೇಶದ ಆರ್ಥಿಕತೆ 3 ನೆ ಸ್ಥಾನಕ್ಕೆ ಬರಲಿದೆ. ಇನ್ನೂ




10–15 ವರ್ಷದಲ್ಲಿ ದೇಶ ಸೂಪರ್ ಪಾವರ್ ಆಗಿ ಆರ್ಥಿಕವಾಗಿ ನಂಬರ್ 1 ಆಗಲಿದೆ. ಹಾಗಾಗಿ ಮೋದಿಯವರು ದೇಶದ ಸುರಕ್ಷತೆಗೆ ಬಹಳ ಅವಶ್ಯಕತೆ ಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸದೆ ಮಂಗಲ ಸುರೇಶ ಅಂಗಡಿ, ಮಾಜಿ ವಿಧಾನಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ, ಪ್ರಮುಖರಾದ ಶಿಲ್ಪಾ ಶೆಟ್ಟರ್, ಶ್ರದ್ಧಾ ಶೆಟ್ಟರ್, ರಾಜು ಜೋಶಿ, ಡಾ. ಕಿರಣ ಪೋತದಾರ, ಸಂಗೀತಾ ದೇಸಾಯಿ, ಬಿ.ಎಂ. ಪಾಟೀಲ್, ಡಾ. ಧನಶ್ರೀ ಕುಲಕರ್ಣಿ, ಪ್ರಿಯಾಂಕಾ ಪೂಜಾರಿ, ಡಾ. ಕೃಷ್ಣಕುಮಾರ ಕಣ್ಣೆ, ಸಾಗರ ಬಿರ್ಜೆ, ರವಿರಾಜ ಚೌಗಲಾ, ವಿಶಾಲ ಪಾಟೀಲ, ಪ್ರಸಾದ, ಪಂಚಾಕ್ಷರಿಮಠ ಹಾಗೂ ವಿದ್ಯಾರ್ಥಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

## ಜಗದೀಶ್ ಶೆಟ್ಟರ್ ಗೆದ್ದರೆ ಕೇಂದ್ರ ಸಚಿವರಾಗುತ್ತಾರೆ: ಗಾಲಿ ಜನಾರ್ಧನ ರೆಡ್ಡಿ

ಬೆಳಗಾವಿ: ಜಗದೀಶ್ ಶೆಟ್ಟರ್ ಅವರನ್ನು ಗೆಲ್ಲಿಸಿದರೆ ಅವರು ಮೋದಿಯವರ ಜೊತೆಗೆ ಸೇರಿ ಕೇಂದ್ರದ ಸಚಿವರಾಗಿ ಬೆಳಗಾವಿಯ ಸಮಗ್ರ ಅಭಿವೃದ್ಧಿ ಮಾಡುತ್ತಾರೆ ಎಂದು ಗಂಗಾವತಿ ಶಾಸಕ ಗಾಲಿ ಜನಾರ್ಧನ ರೆಡ್ಡಿ ಅವರು ಹೇಳಿದ್ದಾರೆ.

ಲೋಕಸಭಾ ಚುನಾವಣೆ ಪ್ರಚಾರಾರ್ಥವಾಗಿ ರಾಮದುರ್ಗ ಮತಕ್ಷೇತ್ರದ ಸುರೇಬಾನ ಗ್ರಾಮದಲ್ಲಿ ಜರುಗಿದ ಬಹಿರಂಗ ಸಮಾವೇಶದಲ್ಲಿ ಮಾತನಾಡಿದ ಅವರು, ಜಗದೀಶ್ ಶೆಟ್ಟರ್ ಅವರು 6 ಬಾರಿ ಶಾಸಕರಾಗಿ ಎಲ್ಲ ಹುದ್ದೆಗಳ ಅನುಭವ ಅವರಿಗೆ ಇದೆ. ಕಾಂಗ್ರೆಸ್ ಸರ್ಕಾರ ಪೊಳ್ಳು ಗ್ಯಾರಂಟಿಗಳಿಂದ ಅಧಿಕಾರಕ್ಕೆ ಬಂದಿದೆ. ಸುಳ್ಳು ಭರವಸೆ ನೀಡಿ ಅಧಿಕಾರಕ್ಕೆ ಬಂದಿದೆ. ಅನೇಕ ವಸ್ತುಗಳ ಬೆಲೆ ಏರಿಕೆ ಆಗಿದೆ. ಈ ಮೂಲಕ ಕಾಂಗ್ರೆಸ್ ಸರ್ಕಾರ ಒಂದು ಕೈಯಿಂದ ಕೊಟ್ಟು ಮತ್ತೊಂದು ಕೈಯಿಂದ ಕಸಿದುಕೊಳ್ಳವ ಕೆಲಸ ಕಾಂಗ್ರೆಸ್ ಮಾಡುತ್ತಿದೆ ಎಂದರು.

ಕಾಂಗ್ರೆಸ್ ಪಕ್ಷ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಒಬ್ಬ ಮನುಷ್ಯ ಮರಣ ಹೊಂದಿದ ನಂತರ 55% ಆಸ್ತಿ ಸರ್ಕಾರದ ಪಾಲಾಗಲಿದೆ. ಹಾಗಾಗಿ ನಾವು ತುಂಬಾ ಎಚ್ಚರಿಕೆಯಿಂದ ಹೆಜ್ಜೆ ಇಡಬೇಕು. ಅವರ ಗ್ಯಾರಂಟಿಗಳಿಗೆ ನಾವು ಆಸೆ ಪಟ್ಟರೆ ನಿಮ್ಮ ಆಸ್ತಿ 55% ಕಿತ್ತುಕೊಳ್ಳುತ್ತಾರೆ. ಬಿಜೆಪಿಯನ್ನು ಅಧಿಕಾರದಿಂದ ಕೆಳಗಿಳಿಸಲು ಕಾಂಗ್ರೆಸ್ ಜನರಿಗೆ ಸುಳ್ಳು ಭರವಸೆ ನೀಡುತ್ತಿದ್ದಾರೆ



ಎಂದು ಗಾಲಿ ಜನಾರ್ಧನ ರೆಡ್ಡಿ ಹೇಳಿದ್ದಾರೆ.

ಬಳಿಕ ಮಾತನಾಡಿದ ಶಂಕರಪಾಟೀಲ್ ಮುನೇನಕೊಪ್ಪ ಅವರು, ನರೇಂದ್ರ ಮೋದಿವರನ್ನು ಮೂರನೇ ಸಲ ಪ್ರಧಾನಿ ಮಾಡಬೇಕು ಎಂದು ಎಲ್ಲರೂ ತೀರ್ಮಾನಕ್ಕೆ ಬಂದಿದ್ದಾರೆ. ಕನ್ಯಾಕುಮಾರಿಯಿಂದ ಕಾಶ್ಮೀರದ ವರೆಗೆ ಪ್ರಪಂಚದ ಪ್ರತಿಯೊಂದು ಹಳ್ಳಿಯಲ್ಲೂ ಭಾರದ ಮುಂದಿನ ಪ್ರಧಾನಿ ನರೇಂದ್ರ ಮೋದಿಯವರು ಆಗಬೇಕು ಎಂದು ಜನ ಬಯಸಿದ್ದಾರೆ. ಸೂರ್ಯ ಚಂದ್ರ ಹುಟ್ಟುವುದು ಎಷ್ಟು ಸತ್ಯ ಇದೆ, ಅದೇ ರೀತಿ ನರೇಂದ್ರ ಮೋದಿ ಮೂರನೆ ಸಲ ಪ್ರಧಾನಿ ಆಗುವುದು ಅಷ್ಟೇ ಸತ್ಯ ಇದೆ. ನರೇಂದ್ರ ಮೋದಿ ಪ್ರಧಾನಿಯಾದರೆ ಇಲ್ಲಿಂದ ಜಗದೀಶ್ ಶೆಟ್ಟರ್ ಅವರನ್ನು ಗೆಲ್ಲಿಸಬೇಕು. ಜಗದೀಶ್ ಶೆಟ್ಟರ್ ಅವರು ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ಅವರು ರಾಜ್ಯಕ್ಕೆ ಅನೇಕ ಕುಡುಗೆ ಕೊಟ್ಟಿದ್ದಾರೆ. ಬರಗಾಲ ಬಂದಾಗ ಹಾಗೂ ಹೆಚ್ಚು ಮಳೆ ಆದಾಗ ರೈತರ ಖಾತೆಗೆ ನೇರವಾಗಿ 25 ಸಾವಿರ ವರ್ಗವಣೆ ಮಾಡಿದ ಕೀರ್ತಿ ಜಗದೀಶ್ ಶೆಟ್ಟರ್ ಹಾಗೂ ಯಡಿಯೂರಪ್ಪ ಅವರಿಗೆ ಸಲ್ಲುತ್ತದೆ. ರಾಜ್ಯದಲ್ಲಿ ಬರಗಾಲ ಬಂದರು ರೈತ–ರಿಗೆ ಪರಿಹಾರ ನೀಡಲು ಈಗಿನ ಕಾಂಗ್ರೆಸ್ ಸರ್ಕಾರಕ್ಕೆ ಆಗುತ್ತಿಲ್ಲ. ಹಾಗಾಗಿ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯಬೇಕು ಎಂದು ತಿಳಿಸಿದರು.

ಈ ವೇಳೆ ಮಾಜಿ ವಿಧಾನಪ–ರಿಷತ್ ಸದಸ್ಯರಾದ ಎಂ.ಡಿ. ಲಕ್ಷ್ಮೀನಾರಾಯಣ, ಮಹಾಂತೇಶ ಕವಟಗಿಮಠ, ಮಾಜಿ ಶಾಸಕರಾದ ಮಹಾದೇವಪ್ಪ ಯಾದವಾಡ, ರಾಜ್ಯ ನೇಕಾರ ಪ್ರಕೋಷ್ಠ ಸಂಚಾಲಕರಾದ ಬಿ.ಎಸ್. ಸೋಮಶೇಖರ್, ಬಿಜೆಪಿ ಜಿಲ್ಲಾಧ್ಯಕ್ಷರಾದ ಸುಭಾಷ ಪಾಟೀಲ, ಮಂಡಲ ಅಧ್ಯಕ್ಷರಾದ ರಾಜೇಶ ಬಿಳಗಿ, ಪ್ರಮುಖರಾದ ರಮೇಶ ದೇಶಪಾಂಡೆ, ರೇಣಪ್ಪ ಸೋಮಗೊಂಡ, ಪಿ.ಎಫ್. ಪಾಟೀಲ ಹಾಗೂ ಪಕ್ಷದ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಉಪಸ್ಥಿತ–ರಿದ್ದರು.

# ಅಧಿಕಾರಿ, ಸಿಬ್ಬಂದಿಗಳು ಪರಸ್ಪರ ಸಮನ್ವಯದೊಂದಿಗೆ ಜಾಗರೂಕತೆಯಿಂದ ಕಾರ್ಯನಿರ್ವಹಿಸಿ: ಜಿ.ಪಂ. ಸಿ.ಇ.ಓ ರಾಹುಲ ಶಿಂಧೆ

ಬೆಳಗಾವಿ: ಲೋಕಸಭಾ ಚುನಾವಣೆಗೆ ಮತದಾನ ದಿನ ಹತ್ತಿರವಾಗುತ್ತಿದ್ದು ಚುನಾವಣೆಗೆ ನಿಯೋಜಿತ ಎಲ್ಲ ಅಧಿಕಾರಿ ಸಿಬ್ಬಂದಿಗಳು ಅತೀ ಜಾಗರೂಕತೆಯಿಂದ ಕಾರ್ಯನಿರ್ವಹಿಸಬೇಕು. ಅಧಿಕಾರಿಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವುದರ ಮೂಲಕ ಯಾವುದೆ ಲೋಪಗಳಿಗೆ ಆಸ್ಪದ ನೀಡದಂತೆ ನಿಗಾವಹಿಸಲು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ. ಸಿ.ಇ.ಓ ಆದ ರಾಹುಲ ಶಿಂಧೆ ಅವರು ಸೂಚನೆ ನೀಡಿದರು.

ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ (ಏ.30) ರಂದು ಜರುಗಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು, ಸೆಕ್ಟೆರ ಅಧಿಕಾರಿ ಹಾಗೂ ವಿವಿಧ ಸಮಿತಿಗಳ ನೋಡೆಲ್ ಅಧಿಕಾರಿಗಳ ವೀಡಿಯೊ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮತದಾನ ದಿನದಂದು ಸೆಕ್ಟೆರ ಅಧಿಕಾರಿಗಳ ಪಾತ್ರ ಬಹುಮುಖ್ಯವಾಗಿರುತ್ತದೆ. ಮತದಾನ ಪ್ರಾರಂಭದಿಂದ ಮುಕ್ತಾಯದ ವರೆಗೂ ಸೆಕ್ಟೆರ ಅಧಿಕಾರಿಗಳು ಅತೀ ಜಾಗರೂಕತೆಯಿಂದ ಚುನಾವಣಾ ಆಯೋಗದ ನಿರ್ದೇಶನಗಳನ್ವಯ ಕಾರ್ಯನಿರ್ವಹಿಸಬೇಕು. ಮತದಾನ ಪ್ರಾರಂಭ ದಿಂದ ಮುಕ್ತಾಯದ ವರೆಗಿನ ವರದಿಗಳನ್ನು ನಿಗದಿತ ಸಮಯಕ್ಕೆ ಒದಗಿಸಬೇಕು. ಸೆಕ್ಟೆರ ಅಧಿಕಾರಿಗಳಿಗೆ ವಾಹನದ ಜೊತೆಗೆ ಶಸ್ತ್ರ ಸಜ್ಜಿತ ಪೋಲಿಸ ಭದ್ರತೆ ಒದಗಿಸುವಂತೆ ತಿಳಿಸಿದರು.

ಚುನಾವಣೆಗೆ ಸಂಬಂಧಿಸಿದ ದೂರುಗಳು ಬಂದಲ್ಲಿ ಕೂಡಲೇ ದೂರಿನ ಕುರಿತು ಕ್ರಮ ಕೈಗೊಳ್ಳಬೇಕು. ಚುನಾವಣೆಯ 72 ಹಾಗೂ 24 ಗಂಟೆಯ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು. ಮತಗಟ್ಟೆಗಳಲ್ಲಿ ಅಗತ್ಯದ ಪೋಲಿಸ್ ಸಿಬ್ಬಂದಿಗಳ ನಿಯೋಜನೆ ಕುರಿತು ಚರ್ಚಿಸಿದರು.




ಮತಗಟ್ಟೆ ಅಧಿಕಾರಿಗಳು, ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ ಆಯೋಜಿಸಲಾಗುವ ತರಬೇತಿ ದಿನದಂದು ಎಲ್ಲ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಮತದಾನ ಮಾಡುವಂತೆ ಅಗತ್ಯದ ಕ್ರಮ ವಹಿಸಬೇಕು. ತರಬೇತಿ ಕೇಂದ್ರದಲ್ಲಿ ತೆರೆಯಲಾಗುವ ಮತಗಟ್ಟೆಗಳಲ್ಲಿ ಮತದಾನದ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು. ಚುನಾವಣೆ ಕಾರ್ಯಕ್ಕೆ ನಿಯೋಜಿತ ಅಗತ್ಯ ಸೇವೆಗಳಡಿ ಬರುವಂತಹ ಅಧಿಕಾರಿ, ಸಿಬ್ಬಂದಿಗಳಿಗೆ ಮತದಾನ ಮಾಡಲು ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ ಎಂದರು.

ವಿಕಲಚೇತನರು ಮತದಾನದ ದಿನದಂದು ಮತಗಟ್ಟೆಗಳಿಗೆ ಆಗಮಿಸಲು ವಾಹನ, ಗಾಲಿ ಕುರ್ಚಿ ಸೌಲಭ್ಯಗಳ ಕುರಿತು ಮನವಿ ಸಲ್ಲಿಸಿದಲ್ಲಿ ಅಂತಹ ವಿಕಲಚೇತನ ಮತದಾರರಿಗೆ ಸೌಲಭ್ಯ ಒದಗಿಸಲು ತಿಳಿಸಿದರು. ಈ ಕುರಿತು ಎಂ.ಆರ್.ಡಬ್ಲೂಗಳಿಂದ ವರದಿ ಪಡೆದುಕೊಂಡು ವಿಕಲಚೇತನ ಮತದಾರರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಕ್ರಮ ವಹಿಸುವಂತೆ ತಿಳಿಸಿದರು.

ಜಿ.ಪಂ. ಮುಖ್ಯ ಯೋಜನಾಧಿಕಾರಿಗಳಾದ ಗಂಗಾಧರ ದಿವಕರ ಮಾತನಾಡಿ ಚುನಾವಣೆಗೆ ಸಂಬಂಧಿಸಿದಂತೆ ಮಸ್ಟರಿಂಗ್ ಹಾಗೂ ಡಿ ಮಸ್ಟರಿಂಗ್ ಕಾರ್ಯಗಳು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳ್ಳಬೇಕು. ಸಹಾಯಕ ಚುನಾವಣಾಧಿಕಾರಿಗಳು ಪ್ರತಿ ಎರಡು ಗಂಟೆಗಳ ವರದಿಯನ್ನು ನಿಗದಿತ ಕಾಲಮಿತಿಯೊಳಗೆ ಸಲ್ಲಿಸಬೇಕು. ಮತದಾನ ದಿನದಂದು ಸೆಕ್ಟೆರ ಅಧಿಕಾರಿಗಳು ಅತೀ ಜಾಗರೂಕತೆಯಿಂದ ಕಾರ್ಯನಿರ್ವಹಿಸುವುದರ ಮೂಲಕ ತಮ್ಮ ವ್ಯಾಪ್ತಿಯ ಎಲ್ಲ ಮತಗಟ್ಟೆಗಳಿಗೆ ತಲುಪಿರುವ ಹಾಗೂ ನಿರ್ಗಮಿಸಿರುವ ಕುರಿತು ವರದಿಯನ್ನು ಸಲ್ಲಿಸಬೇಕು ಎಂದು ಸೆಕ್ಟೆರ ಅಧಿಕಾರಿಗಳ ಜವಾಬ್ದಾರಿಗಳ ಕುರಿತು ವಿವರಿಸಿದರು.

ಸಭೆಯಲ್ಲಿ ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾರಿಗಳ ಕಚೇರಿಯ ಸಹಾಯಕ ಚುನಾವಣಾಧಿಕಾರಿ ಬಸವರಾಜ ಅಡವಿಮಠ, ಚಿಕ್ಕೋಡಿ ಉಪವಿಭಾಗಾಧಿಕಾರಿ ಶ್ರೀಮತಿ ಮೆಹಬೂಬಿ, ಚಿಕ್ಕೋಡಿ ತಹಶೀಲ್ದಾರ ಚಿದಂಬರ ಕುಲಕರ್ಣಿ ಸೇರಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು, ತಹಶೀಲ್ದಾರರು, ಸೆಕ್ಟೆರ ಅಧಿಕಾರಿಗಳು, ವಿವಿಧ ಸಮಿತಿಯ ನೋಡೆಲ್ ಅಧಿಕಾರಿಗಳು ಹಾಜರಿದ್ದರು.

# ಪ್ರಧಾನಿ ಮೋದಿ ರಾಜಕಾರಣದಲ್ಲಿ ವಿಫಲ: ಶಾಸಕ ಸವದಿ ಆರೋಪ

ವಿಜಯಪುರ: ಪ್ರಧಾನಿ ಮೋದಿ ಅವರು ತಮ್ಮ 10 ವರ್ಷಗಳ ಆಡಳಿತದಲ್ಲಿ ಮಾಡಿರುವ ಕೆಲಸಗಳ ಆಧಾರದ ಮೇಲೆ ಚುನಾವಣೆ ಮಾಡುವುದು ಬಿಟ್ಟು ಜಾತಿ, ಧರ್ಮದ ಆಧಾರ ಮೇಲೆ ಮತಯಾಚನೆ ಮಾಡುತ್ತಿರುವುದನ್ನು ಗಮನಿಸಿದರೆ ಮೋದಿ ಅವರು ರಾಜಕಾರಣದಲ್ಲಿ ವಿಫಲವಾಗಿದ್ದಾರೆ ಎಂಬುದು ಮೇಲ್ನೋಟಕ್ಕೆ ಸಾಬೀತಾಗಿದೆ ಎಂದು ಅಥಣಿ ಕ್ಷೇತ್ರದ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಆಳ, ಅಗಲ ನೋಡಿ ಬಂದಿದ್ದೇನೆ. ಚುನಾವಣೆಯಲ್ಲಿ ಭಾವನಾತ್ಮಕ ವಿಷಯ ಕೆದಕಿ, ನಡುವೆ ವಿಷಬೀಜ ಬಿತ್ತಿ ಮತಗಳನ್ನು ಪಡೆಯುವ ತಂತ್ರ ನಡೆಸುವುದು ನನಗೆ ಗೊತ್ತಿದೆ. ಈ ಚುನಾವಣೆಯಲ್ಲಿ ಅವರ ಈ ಆಟ ನಡೆಯದು ಎಂದರು.

10 ವರ್ಷಗಳ ಆಡಳಿತಾವಧಿಯಲ್ಲಿ ಮೋದಿ ನೀಡಿದ್ದ ಭರವಸೆಗಳು ಈಡೇರಿಲ್ಲ. 'ಗುಜರಾತ್ ಮಾದರಿ' ಅಭಿವೃದ್ಧಿ ಆಧಾರಿತ ಆಡಳಿತ ದೇಶದಲ್ಲಿ ತರುತ್ತೇವೆ, ಅಟಲ್ ಬಿಹಾರಿ ವಾಜಪೇಯಿ ಕನಸು ನನಸು ಮಾಡುತ್ತೇವೆ, ನದಿ ಜೋಡಣೆ ಮಾಡುತ್ತೇವೆ ಎಂದು ಅಬ್ಬರದ ಪ್ರಚಾರ ನಡೆಸಿದ್ದರು. ದೇಶದ ಜನತೆ ನಂಬಿ ಮತಹಾಕಿದ್ದರು. ಆದರೆ, ಯಾವೊಂದು ಭರವಸೆಯೂ ಈಡೇರಿಲ್ಲ ಎಂದು ಆರೋಪಿಸಿದರು.

ಸ್ವಿಸ್ ಬ್ಯಾಂಕ್ ಹಣ ತಂದು ದೇಶದ ಸಾಲ ತೀರಿಸಿ, ಉಳಿದ ಹಣದಲ್ಲಿ ದೇಶದ ಎಲ್ಲ ರಸ್ತೆಗಳಿಗೆ ಚಿನ್ನದ ಲೇಪನ



ಮಾಡುತ್ತೇವೆ, ನಿರುದ್ಯೋಗ ಸಮಸ್ಯೆ ನಿವಾರಣೆ ಸಂಬಂಧ ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಸುತ್ತೇವೆ, ಬೆಲೆ ಏರಿಕೆ ನಿಯಂತ್ರಿಸಲಾಗುವುದು, ಡಾಲರ್ ಎದುರು ರೂಪಾಯಿ ಮೌಲ್ಯವನ್ನು ಹೆಚ್ಚಿಸುತ್ತೇವೆ, ರೈತರ ಆದಾಯ ದ್ವಿಗುಣ ಮಾಡುತ್ತೇವೆ ಎಂಬ ಒಂದು ಭರವಸೆಯೂ ಈಡೇರಿಸಿಲ್ಲ. ದೇಶದ ಬಡವರು, ಮತದಾರರು, ರೈತರು ಭ್ರಮನಿರಸನವಾಗಿದ್ದಾರೆ ಎಂದರು.

**ಕಾಂಗ್ರೆಸ್ ಸಂಕಲ್ಪಕ್ಕೆ ಸ್ಪಂದನೆ:** ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಬಡ ಜನರಿಗೆ ಹೆಚ್ಚು ಅನುಕೂಲವಾಗಿದೆ. ಪರಿಣಾಮ ಕಾಂಗ್ರೆಸ್ ಸರ್ಕಾರದ ಪರ ಜನರ ಒಲವು ಹೆಚ್ಚಾಗಿದೆ. 20 ಕ್ಷೇತ್ರಗಳಲ್ಲಿ ಗೆಲ್ಲಬೇಕೆಂಬ ಕಾಂಗ್ರೆಸ್ ಸಂಕಲ್ಪಕ್ಕೆ ನಾಡಿನ ಮತದಾರರು ಸ್ಪಂದಿಸಲಿದ್ದಾರೆ. ಪೂರಕ ವಾತಾವಣ ನಿರ್ಮಾಣವಾಗಿದೆ ಎಂದರು.

ಲೋಕಸಭೆ ಚುನಾವಣೆಯಲ್ಲಿ ವಿಜಯಪುರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಗೆಲ್ಲುವುದು ಸೂರ್ಯಚಂದ್ರ ಉದಯಿಸುವಷ್ಟೇ ನಿಶ್ಚಿತ, ಕನಿಷ್ಠ 1 ಲಕ್ಷ ಮತಗಳ ಅಂತರದಿಂದ ಗೆಲುವು ನಿಶ್ಚಿತ ಎಂದರು.

ಮೂರು ಬಾರಿ ಸಂಸದರಾದ ರಮೇಶ ಜಿಗಜಿಣಗಿ ಅವರು ಆಡಳಿತ ವಿರೋಧಿ ಅಲೆ ಎದುರಿಸುತ್ತಿದ್ದಾರೆ. ನಿರೀಕ್ಷಿತ ಅಭಿವೃದ್ಧಿ ಕೆಲಸ ಮಾಡಿಲ್ಲ, ಜನರ ಕಷ್ಟ ಆಲಿಸಿಲ್ಲ, ಹಳ್ಳಿ ಸಂಪರ್ಕ ಮಾಡಿಲ್ಲದಿರುವುದು ಕಾಂಗ್ರೆಸ್ ಗೆಲುವಿಗೆ ಪೂರಕವಾಗಲಿದೆ ಎಂದರು.

ವಿಜಯಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜು ಆಲಗೂರ, ಜಿಲ್ಲಾ ಕಾಂಗ್ರೆಸ್ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ, ಶಾಸಕ ವಿಠಲ ಕಟಕಧೋಂಡ, ಮುಖಂಡರಾದ ಅಬ್ದುಲ್ ಹಮೀದ್ ಮುಶ್ರೀಫ್, ಸುರೇಶ ಗೊಣಸಗಿ ಇದ್ದರು.

# ಬಳ್ಳಾರಿ ರೈಲ್ವೆ ಪೊಲೀಸರ ಕಾರ್ಯಾಚರಣೆ

## 06 ಕೆ.ಜಿ. ಗಾಂಜಾ ವಶ, ಓರ್ವ ಆರೋಪಿಯ ಬಂಧನ



ಬಳ್ಳಾರಿ: ಲೋಕಸಭಾ ಸಾರ್ವತ್ರಿಕ ಚುನಾವಣೆ ನಿಮಿತ್ಯ ಅಕ್ರಮ ಚಟುವಟಿಕೆಗಳ ತಡೆಗೆ ತೀವ್ರ ನಿಗಾ ವಹಿಸಲಾಗುತ್ತಿದ್ದು, ಇದರ ಅಂಗವಾಗಿ ಬಳ್ಳಾರಿ ರೈಲ್ವೆ ಪೊಲೀಸರು ಕಳೆದ ಏ.28 ಭಾನುವಾರದಂದು ಮೈಸೂರು-ಹುಬ್ಬಳ್ಳಿ ಮಾರ್ಗದ ಹಂಪಿ ಎಕ್ಸ್ಪ್ರೆಸ್ ರೈಲಿನಲ್ಲಿ ತಪಾಸಣೆ ನಡೆಸುವ ಸಂದರ್ಭದಲ್ಲಿ 06 ಕೆ.ಜಿ. ಗಾಂಜಾ ಸಾಗಿಸುತ್ತಿದ್ದುದನ್ನು ಪತ್ತೆಹಚ್ಚಿ, ಓರ್ವ ಆರೋಪಿಯನ್ನು ಗಾಂಜಾ ಸಮೇತ ಬಂಧಿಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಆರೋಪಿಯನ್ನು ಆಂಧ್ರಪ್ರದೇಶದ ಅನಂತಪುರಂ ಜಿಲ್ಲೆ ಗುಂತಕಲ್ನ ತಿಲಕ್ ನಗರದ ವಾಸಿ 38 ವರ್ಷ ವಯಸ್ಸಿನ ರಘು ಶಂಕರ್ ಎಂದು ಗುರುತಿಸಲಾಗಿದ್ದು, ಆರೋಪಿಯು ಹಂಪಿ ಎಕ್ಸ್ಪ್ರೆಸ್ ರೈಲಿನಲ್ಲಿ ತಲಾ 01 ಕೆ.ಜಿ. ತೂಕದ 06 ಪಾಕೆಟ್ ಅಂದರೆ ಒಟ್ಟು 06 ಕೆ.ಜಿ. ಯಷ್ಟು ಗಾಂಜಾ ಸಾಗಿಸುತ್ತಿದ್ದುದನ್ನು ಬಳ್ಳಾರಿ ರೈಲ್ವೆ ಪೊಲೀಸರು ಪತ್ತೆಹಚ್ಚಿದ್ದಾರೆ. 06 ಕೆ.ಜಿ. ಗಾಂಜಾದ ಮೌಲ್ಯ 06 ಲಕ್ಷ ರೂ. ಗಳೆಂದು ಅಂದಾಜಿಸಲಾಗಿದೆ. ಆರೋಪಿಯನ್ನು ಬಂಧಿಸಿ, ನಿಯಮಾನುಸಾರ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಪ್ರಕರಣ ಕುರಿತು ನೈರುತ್ಯ ರೈಲ್ವೆ ಹುಬ್ಬಳ್ಳಿ ವಿಭಾಗದ ಡಿವಿಜನಲ್ ಸೆಕ್ಯುರಿಟಿ ಕಮಿಷನರ್, ಅವರು ಹುಬ್ಬಳ್ಳಿಯ ನೈರುತ್ಯ ರೈಲ್ವೆ ವಿಭಾಗದ ಚುನಾವಣಾ ಶಾಖೆಗೆ ವರದಿ ಸಲ್ಲಿಸಿದ್ದಾರೆ.

# ಹೊಸ ಮೋಕಾದಲ್ಲಿ ಮತದಾನ ಜಾಗೃತಿ ಅಂಗವಾಗಿ ಕ್ರಿಕೆಟ್ ಓಟರ್ಸ್ ಕಪ್ ಪಂದ್ಯಾವಳಿ



ಬಳ್ಳಾರಿ: ಮೇ 07 ರಂದು ಎಲ್ಲಾ ಕ್ರೀಡಾಪಟುಗಳು ತಪ್ಪದೇ ಮತದಾನ ಮಾಡಿ ಹಾಗೂ ತಮ್ಮ ಸುತ್ತಮುತ್ತಲಿನ ಅರ್ಹ ನಾಗರಿಕರಿಗೂ ಮತದಾನ ಮಾಡುವಂತೆ ತಿಳಿಸಿ ಎಂದು ತಾಲ್ಲೂಕು ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ತಾಪಂ ಇಒ ಮಡಗಿನ ಚನ್ನಬಸಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಬಳ್ಳಾರಿ ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಸಾರ್ವತ್ರಿಕ ಚುನಾವಣಾ-2024ರ ಮತದಾನ ಜಾಗೃತಿ ಮೂಡಿಸುವ ನಿಮಿತ್ತ ಹೊಸ ಮೋಕ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಹೋಬಳಿ ಮಟ್ಟದ ಪುರುಷರ ಓಟರ್ಸ್ ಕಪ್ ಪಂದ್ಯಾವಳಿಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕ್ರೀಡಾಪಟುಗಳು ಆಟದಲ್ಲಿ ಉತ್ಸುಕರಾದಂತೆ ಮತ ಚಲಾವಣೆಯಲ್ಲಿ ಕೂಡ ಉತ್ಸುಕತೆಯಿಂದ ಮತದಾನ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ಮಹಮ್ಮದ್ ಗೌಸ್ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಬಾಲಕ ನಾಪತ್ತೆ: ಪ್ರಕರಣ ದಾಖಲು



ಬಳ್ಳಾರಿ: ನಗರದ ಕಂಟೋನ್ಮೆಂಟ್ನ ಸರ್ಕಾರಿ ಬಾಲಕರ ಬಾಲ ಮಂದಿರದ ಆತ್ರೇಶ್ ಕುಲಕರ್ಣಿ ಎನ್ನುವ 16 ವರ್ಷದ ಅಪ್ರಾಪ್ತ ಬಾಲಕ ಏ.17 ರಂದು ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಕೌಲ್ಬಜಾರ್ ಪೊಲೀಸ್ ಠಾಣೆಯ ಸಬ್ಇನ್ಸ್ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ ಗುರುತು: ಎತ್ತರ 154 ಸೆಂ.ಮೀ., ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈ ಬಣ್ಣ, ನೀಲಿ ಬಣ್ಣದ ಚೆಕ್ಸ್ ಅಂಗಿ ಮತ್ತು ಬ್ರೌನ್ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು, ಹಿಂದಿ, ಇಂಗ್ಲೀಷ್ ಭಾಷೆ ಮಾತನಾಡುತ್ತಾನೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಬಾಲಕನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ಬಜಾರ್ ಪೊಲೀಸ್ ಠಾಣೆಯ ದೂ.08392-240731, ಪಿಐ ಮೊ.9480803047, ಪಿಎಸ್ಐ ಮೊ.9480803084 ಮತ್ತು ಬಳ್ಳಾರಿ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧೆಡೆ ಅಬಕಾರಿ ಪೊಲೀಸ್ ಅಧಿಕಾರಿಗಳಿಂದ ದಾಳಿ: 03 ಪ್ರಕರಣ ದಾಖಲು





ಬಳ್ಳಾರಿ: ಲೋಕಸಭೆ ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಅಕ್ರಮವಾಗಿ ಮದ್ಯ ಸಾಗಾಣಿಕೆ ಸಂಬಂಧಿಸಿದಂತೆ ಅಬಕಾರಿ ಪೊಲೀಸ್ ಅಧಿಕಾರಿಗಳಿಂದ ವಿವಿಧೆಡೆ ದಾಳಿ ನಡೆಸಿ 03 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಅಬಕಾರಿ ಉಪ ಆಯುಕ್ತ ಮಂಜುನಾಥ. ಎನ್ ಅವರು ತಿಳಿಸಿದ್ದಾರೆ. ಬಳ್ಳಾರಿ ನಗರದ ಕೇಂದ್ರ ಬಸ್ ನಿಲ್ದಾಣದ ಬಳಿ ಇರುವ ಜೋಳದರಾಶಿ ದೊಡ್ಡನಗೌಡರ ರಂಗಮಂದಿರದ ಗೇಟ್ ಮುಂದೆ ಮುಖ್ಯ ರಸ್ತೆಯಲ್ಲಿ ರಸ್ತೆಗಾವಲು ವೇಳೆ ದ್ವಿಚಕ್ರ ವಾಹನದಲ್ಲಿ 8.640 ಲೀ. (ಅಂದಾಜು ಮೌಲ್ಯ ರೂ.13840) ಮದ್ಯವನ್ನು ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆಹಚ್ಚಿ, ವಾಹನ ಸವಾರ ವಶಕ್ಕೆ ಪಡೆದುಕೊಂಡು ಮದ್ಯ ಹಾಗೂ ವಾಹನವನ್ನು ಜಪ್ತುಪಡಿಸಲಾಗಿದೆ. ಸಿರುಗುಪ್ಪ ನಗರದ ಮಹಾತ್ಮಗಾಂಧಿ ವೃತ್ತದಲ್ಲಿ ರಸ್ತೆಗಾವಲು ಸಂದರ್ಭದಲ್ಲಿ ದ್ವಿಚಕ್ರ ವಾಹನದಲ್ಲಿ 8.640 ಲೀಟರ್ ಮದ್ಯ ಮತ್ತು 15.600 ಲೀಟರ್ ಬಿಯರ್ (ಅಂದಾಜು ಮೌಲ್ಯ ರೂ.42501) ಅನ್ನು ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆಹಚ್ಚಿ, ವಾಹನ ಸವಾರನ್ನು, ಮದ್ಯ, ಬಿಯರ್ ಹಾಗೂ ವಾಹನವನ್ನು ಜಪ್ತುಪಡಿಸಿ ಪ್ರಕರಣ ದಾಖಲಿಸಲಾಗಿದೆ.

# ಚುನಾವಣೆ ಕರ್ತವ್ಯ ನಿರತ ಸಿಬ್ಬಂದಿಗೆ ಮೇ. 01 ರಿಂದ ಮತ ಚಲಾವಣೆಗೆ ಅವಕಾಶ

ಬಳ್ಳಾರಿ: ಬಳ್ಳಾರಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಕರ್ತವ್ಯ ನಿಮಿತ್ಯ ಮೇ. 07 ರ ಮತದಾನ ದಿನದಂದು ಚುನಾವಣೆ ಸಂಬಂಧಿತ ಅಥ-'ವಾ ಇಲಾಖೆಯ ಅನ್ಯ ಕರ್ತವ್ಯದಲ್ಲಿ ನಿರತರಾಗುವ ಅಧಿಕಾರಿ, ಸಿಬ್ಬಂದಿಗಳಿಗೆ ಮೇ. 01 ರಿಂದ 06 ರವರೆಗೆ ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದ್ದು, ಇದಕ್ಕಾಗಿ ನಗರದ ರೈಲ್ವೆ ನಿಲ್ದಾಣ ಎದುರಿನ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಗಾಂಧಿ ಭವನದಲ್ಲಿ ಫೆಸಿಲಿಟೇಶನ್ ಸೆಂಟರ್ ಸ್ಥಾಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಚುನಾವಣೆ ನಿಮಿತ್ಯ ಮೇ. 07 ರಂದು ಮತದಾನ ನಡೆಯಲಿದ್ದು, ಅಂದು ಚುನಾವಣಾ ಕರ್ತವ್ಯ ನಿರತರಾಗುವ ಅಧಿಕಾರಿ, ಸಿಬ್ಬಂದಿಗಳು ಮತದಾನದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಚುನಾವಣಾ ಆಯೋಗವು ಮತದಾನ ಮಾಡಲು ವಿಶೇಷ ಅವಕಾಶ ಕಲ್ಪಿಸಿದೆ.

ಮತದಾನ ದಿನದಂದು ಚುನಾವಣಾ ಕರ್ತವ್ಯದಲ್ಲಿ ನಿರತರಾಗುವ ಪೊಲೀಸ್,



ಆರೋಗ್ಯ ಇಲಾಖೆಗಳ ಅಧಿಕಾರಿ, ಸಿಬ್ಬಂದಿ, ಸ್ವಚ್ಛತಾ ಕಾರ್ಯದಲ್ಲಿ ನಿರತರಾಗುವವರು, ಇಲಾಖಾ ವಾಹನ ಚಾಲಕರುಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ತಮ್ಮ ಮತವನ್ನು ಮೇ. 01 ರಿಂದ 06 ರವರೆಗೆ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ. ಅಂತಹ ಮತದಾರರನ್ನು ಈಗಾಗಲೆ ಗುರುತಿಸಲಾಗಿದೆ. ಬೇರೆ ಲೋಕಸಭಾ ಕ್ಷೇತ್ರದಲ್ಲಿ ತಮ್ಮ ಮತವಿದ್ದು, ಬಳ್ಳಾರಿ ಲೋಕಸಭಾ ಕ್ಷೇತ್ರದಲ್ಲಿ ಚುನಾವಣಾ ಕರ್ತವ್ಯದಲ್ಲಿ ನಿರತರಾಗಿರುವಂತಹ ಅಧಿಕಾರಿ, ಸಿಬ್ಬಂದಿಗಳಿಗೆ ಈ ವ್ಯವಸ್ಥೆ ಅನುಕೂಲಕರವಾಗಿದೆ. ಮತದಾನ ದಿನದಂದು ಕರ್ತವ್ಯ ನಿರತರಾಗುವ ಅಧಿಕಾರಿ, ಸಿಬ್ಬಂದಿಗಳು ತಮ್ಮ ಮತವನ್ನು ತರಬೇತಿ ನಡೆಯುವ ಸ್ಥಳದಲ್ಲಿಯೇ ಮತ ಚಲಾಯಿಸಲು ಕೂಡ ವ್ಯವಸ್ಥೆ ಮಾಡಿಕೊಡಲಾಗಿದೆ.

ಪ್ರತಿಯೊಂದು ಮತವೂ ಅಮೂಲ್ಯವಾಗಿದ್ದು, ಮತದಾನ ದಿನದಂದು ಚುನಾವಣಾ ಕರ್ತವ್ಯದಲ್ಲಿ ನಿರತರಾಗುವ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ತಮ್ಮ ಮತ ಚಲಾಯಿಸಲು ಚುನಾವಣಾ ಆಯೋಗದಿಂದ ಮಾಡಲಾಗಿರುವ ವಿಶೇಷ ವ್ಯವಸ್ಥೆಯ ಸದುಪಯೋಗ ಪಡೆದುಕೊಂಡು, ಎಲ್ಲರೂ ತಪ್ಪದೆ ತಮ್ಮ ಮತ ಚಲಾಯಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಮನವಿ ಮಾಡಿದ್ದಾರೆ.

# ಗೋಕಾಕ ಶಾಸಕರೇ, ಸಿದ್ದರಾಮಯ್ಯ ಸರ್ಕಾರ ಕೆಡವಲು ನಿಮಗೇನು ನೈತಿಕತೆ ಇದೆ? : ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನೆ

ಗೋಕಾಕ್: ಹಿಂದುಳಿದ ಸಮುದಾಯದ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಪಕ್ಷ ಎರಡನೇ ಬಾರಿಗೆ ಮುಖ್ಯಮಂತ್ರಿಯನ್ನಾಗಿ ಮಾಡಿದೆ. ಪೂರ್ಣ ಬಹುಮತದ ಸಿದ್ದರಾಮಯ್ಯ ನೇತೃತ್ವದ ಸರ್ಕಾರವನ್ನು ಕೆಡಗುವುದು ಅಷ್ಟು ಸುಲಭ ಅಲ್ಲ ಗೋಕಾಕ್ ಶಾಸಕರೇ, ಪದೇ ಪದೇ ಲೋಕಸಭಾ ಚುನಾವಣೆ ನಂತರ ಸರಕಾರ ಬೀಳಿಸುವುದಾಗಿ ಹೇಳುತ್ತಿದ್ದೀರಿ. ಸರ್ಕಾರ ಕೆಡವಲು ನಿಮಗೇನು ನೈತಿಕತೆ ಇದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನಿಸಿದರು.


ಗೋಕಾಕ್ ನ ವಾಲ್ಮೀಕಿ ಮೈದಾನದಲ್ಲಿ ಮಂಗಳವಾರ ನಡೆದ ಪ್ರಜಾಧ್ವನಿ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಸರ್ಕಾರವನ್ನು ಕೆಡವಲು ಮುಂದಾದರೆ ಇಡೀ ಹಿಂದುಳಿದ ವರ್ಗಗಳ ಕೆಂಗಣ್ಣಿಗೆ ಗುರಿಯಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಕಾಂಗ್ರೆಸ್ ಪಕ್ಷ ಎಂದರೆ ಬದ್ದತೆ, ಎಲ್ಲಾ ಧರ್ಮ, ಜಾತಿ ಸಮುದಾಯದವರಿಗೆ ಮಣೆ ಹಾಕಿದೆ. ಭಾರತದ ಸಂಸ್ಕೃತಿಯನ್ನು ಉಳಿಸುತ್ತಿದ್ದರೆ ಅದು ಕಾಂಗ್ರೆಸ್ ಪಕ್ಷದಿಂದ ಮಾತ್ರ. ಎಲ್ಲಾ ವರ್ಗದವರಿಗೂ ಅಧಿಕಾರ ನೀಡುವ ಪಕ್ಷ ಎಂದು ಹೇಳಿದರು.

ಸಿದ್ದರಾಮಯ್ಯನವರ ನೇತೃತ್ವದಲ್ಲಿ ಐದು ಗ್ಯಾರಂಟಿಗಳನ್ನ ಬಡವರ ಮನೆಗೆ ತಲುಪಿಸುತ್ತಿದ್ದೇವೆ. ಹಿಂದುಳಿದ ವರ್ಗಕ್ಕೆ ಸಿದ್ದರಾಮಯ್ಯ ಕೊಡುಗೆ ಅಪಾರ. ದೇವರಾಜ ಅರಸು ಬಳಿಕ ಅತಿಹೆಚ್ಚು ಬಡವರ ಪರ ಕೆಲಸ ಮಾಡಿವರು ನಮ್ಮ ಸಿಎಂ ಸಿದ್ದರಾಮಯ್ಯನವರು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಇಡೀ ದೇಶದ ಇತಿಹಾಸದಲ್ಲಿ ಕುರುಬ ಸಮುದಾಯದ ವ್ಯಕ್ತಿ ಯನ್ನು ಎರಡನೇ ಬಾರಿಗೆ ಸಿಎಂ ಮಾಡಿದ್ದು ಕಾಂಗ್ರೆಸ್ ಪಕ್ಷ. ಅದರೆ, ಇದ್ದ ಒಬ್ಬ ಕುರುಬ ಸಮಾಜದ ನಾಯಕನನ್ನು ಬಿಜೆಪಿಯಿಂದ ಹೊರಹಾಕಲಾಗಿದೆ ಎಂದು ಟೀಕಿಸಿದರು.

ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್, ಬೆಳಗಾವಿ ಬಗ್ಗೆ ತಾತ್ಸರ ಮನೋಭಾವ ಹೊಂದಿರುವ ವ್ಯಕ್ತಿ. ಜಿಲ್ಲೆಯ ಜನರ ಕಷ್ಟ ಕಾಲದಲ್ಲಿ ಬರದ ಮೋದಿ ಚುನಾವಣೆ ವೇಳೆ ಮತ ಕೇಳಲು ಬರುತ್ತಾರೆ. ಜಿಲ್ಲೆಯ ಅಭಿವೃದ್ಧಿ



ಬಗ್ಗೆ ಮಾತಾನಾಡುವ ನೈತಿಕ ಹಕ್ಕಿದೆಯೇ ಎಂದು ಸಚಿವೆ ಪ್ರಶ್ನಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಇಂಜಿನಿಯರಿಂಗ್ ಪದವಿಧರ , ಸುಸಂಸ್ಕೃತ ವ್ಯಕ್ತಿ. ನಾನು ನನ್ನ ಕ್ಷೇತ್ರ ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಹಗಲಿರುಳು ದುಡಿಯುತ್ತಿರುವೆ. ನನಗೆ ನನ್ನ ಮಗ ಮೃಣಾಲ್ ಹೆಬ್ಬಾಳಕರ್ ಬೆಂಬಲವಾಗಿ ನಿಂತಿದ್ದಾನೆ. ನನ್ನ ಮಗ ಗೆದ್ದರೆ ಬೆಳಗಾವಿ ಕ್ಷೇತ್ರದ ಅಭಿವೃದ್ಧಿಗೆ ಧಾರೆ ಎರೆದುಕೊಡುವೆ. ತಾಯಿಯಾಗಿ ಮಗನ ಪರ ಸೆರಗೊಡ್ಡಿ ಮತಕೇಳುವೆ ಎಂದರು.

ಬಿಜೆಪಿಯವರು ಅಧಿಕಾರಕ್ಕೆ ಬಂದರೆ ಮೀಸಲಾತಿಗೆ ಕಂಟಕ. ಒಂದು ಅವಕಾಶವನ್ನು ಕಾಂಗ್ರೆಸ್ ಪಕ್ಷಕ್ಕೆ ಕೊಡಿ. ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಹುಬ್ಬಳ್ಳಿ ಯಿಂದ ಬಂದಿದ್ದಾರೆ. ಹುಬ್ಬಳ್ಳಿ ಜನ ಅವ್ರನ್ನ ತಿರಸ್ಕಾರ ಮಾಡಿದ್ದಾರೆ, ನಾವೇಗೆ ಅವ್ರನ್ನ ಪುರಸ್ಕರಿಸೋದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಶೆಟ್ಟರ್ ಸೋತರೂ ಕಾಂಗ್ರೆಸ್ ಅವರನ್ನು ಎಂಎಲ್ಸಿ ಮಾಡಿತ್ತು. ಆದರೂ ಶೆಟ್ಟರ್ ನಿಷ್ಠೆ ಬದಲಿಸಿದರು. ಮೊನ್ನೆ ಹುಬ್ಬಳ್ಳಿಯಲ್ಲಿ ಒಂದು ಘಟನೆ ನಡೀತು. ಸರ್ಕಾರ ತನಿಖೆಗೆ ಆದೇಶಿಸಿದರೂ ಬಿಜೆಪಿಗರು ರಾಜಕೀಯವಾಗಿ ಬಳಸಿಕೊಂಡರು. ಆದರೆ, ಪ್ರಜ್ವಲ್ ರೇವಣ್ಣ ವಿಷಯದಲ್ಲಿ ಏನೂ ಮಾಡ್ತಿಲ್ಲ ಯಾಕೆ? ಪ್ರಜ್ವಲ್ ವಿಷಯದಲ್ಲಿ ನಿಮ್ಮ ಬದ್ಧತೆ ಎಲ್ಲಿ ಹೋಯ್ತು. ನಾಗರೀಕ ಸಮಾಜ ತಲೆ ತಗ್ಗಿಸುವಂಥ ಕೆಲಸ ಮಾಡಿರುವ ಪ್ರಜ್ವಲ್ ಬಗ್ಗೆ ಮೈತ್ರಿ ನಾಯಕರು ತುಟಿ ಬಿಚ್ಚುತ್ತಿಲ್ಲ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಕಿಡಿಕಾರಿದರು.

ನಮ್ಮ ಜಿಲ್ಲೆಗೆ ನಿಮ್ಮ ಕೊಡುಗೆ ಏನು ಶೆಟ್ಟರ್ ಅವ್ರೆ, ಐಐಟಿ, ಹೈಕೋರ್ಟ್ ಅನ್ನು ಹುಬ್ಬಳ್ಳಿಗೆ ಕೊಂಡೊಯ್ದರು, ಕರೋನಾ ವೇಳೆ ಆಕ್ಸಿಜನ್ ಸಿಲಿಂಡರ್ ಗಳನ್ನು ಹುಬ್ಬಳ್ಳಿಗೆ ಸ್ಥಳಾಂತರಿಸಿದರು. ಕೇಂದ್ರ ಸಚಿವರೂ, ಶೆಟ್ಟರ್ ಅವರ ಬಿಗರೂ ಆದಂತಹ ಸುರೇಶ್ ಅಂಗಡಿ ಸತ್ತಾಗ ಅವ್ರ ಪಾರ್ಥಿವ ಶರೀರವನ್ನು ಶೆಟ್ಟರ್ ಅವರು ದೆಹಲಿಯಿಂದ ಬೆಳಗಾವಿಗೆ ತರೋಕೆ ಆಗಲಿಲ್ಲ. ಹೇಗೆ ಬೆಳಗಾವಿ ಉದ್ದಾರ ಮಾಡ್ತೀರಾ? ಎಂದು ಪ್ರಶ್ನಿಸಿದರು.

ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಸಚಿವ ಡಾ.ಎಂ.ಸಿ.ಸುಧಾಕರ್, ಮಾಜಿ ಉಪ ಮುಖ್ಯಮಂತ್ರಿ ಹಾಗೂ ಶಾಸಕರಾದ ಲಕ್ಷ್ಮಣ್ ಸವದಿ, ಭದ್ರಾವತಿ ಶಾಸಕರಾದ ಬಿ.ಕೆ.ಸಂಗಮೇಶ್, ಪುಟ್ಟ ರಂಗಶೆಟ್ಟಿ, ರಾಜು ಸೇಠ್, ನಯನಾ ಮೋಟಮ್ಮ, ಕೇರಳ ಶಾಸಕ ರೋಜಿ ಜಾನ್, ವಿಧಾನ ಪರಿಷತ್ ಸದಸ್ಯರಾದ ನಾಗರಾಜ್ ಯಾದವ್, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ ಜಿ, ಭೋವಿ ನಿಗಮದ ಅಧ್ಯಕ್ಷರಾದ ಪ್ರವೀಣ್ ಕುಮಾರ್, ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಿನಯ್ ನಾವಲಗಟ್ಟಿ, ಮುಖಂಡರಾದ ಡಾ.ಮಹಾಂತೇಶ್ ಕಡಾಡಿ, ಮೋಹನ್ ಲಿಂಬಿಕಾಯಿ, ಅಶೋಕ್ ಪೂಜಾರಿ, ಸಿದ್ದಲಿಂಗ ದಳವಾಯಿ, ಅರವಿಂದ ದಳವಾಯಿ, ಚಂದ್ರಶೇಖರ್ ಕೊಣ್ಣೂರ, ಲಕ್ಕಣ್ಣ ಸವಸುದ್ದಿ, ಪ್ರೇಮಾ ಚಿಕ್ಕೋಡಿ, ಬಸವನಗೌಡ ಹೊಳಿಯಾಚೆ, ಪ್ರಕಾಶ್ ಢಾಗೆ, ಜಾರಿಕ್ ನದಾಫ್, ಗಂಗಾಧರ ಬಡಕುಂದ್ರಿ, ಭೀಮಪ್ಪ ಹಂದಿಗುಂದ್, ರಮೇಶ್ ಉಟಗಿ, ಸುರೇಶ್ ಅರಳಿ, ಲಗಮಣ್ಣ ಕಳಸನ್ನವರ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

# ಸೋಲಿನ ಭೀತಿಯಿಂದ ಬಿಜೆಪಿಯಿಂದ ಸಮಾಜ ಒಡೆಯುವ ಕೆಲಸ: ಸಚಿವ ಡಾ.ಎಂ.ಸಿ.ಸುಧಾಕರ್

ಸವದತ್ತಿ: ಸೋಲಿನ ಭೀತಿಯಿಂದ ಪ್ರಧಾನಿ ನರೇಂದ್ರ ಮೋದಿ ಅವರು ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಾಂಗಲ್ಯವನ್ನು ಕಿತ್ತು ಬೇರೆಯವರಿಗೆ ನೀಡಬೇಕಾಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಕೀಳುಮಟ್ಟಕ್ಕಿಳಿದು ಮಾತನಾಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷ ಎಂದರೆ ನುಡಿದಂತೆ ನಡೆಯುವ ಪಕ್ಷ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಬಿಜೆಪಿ ವಿರುದ್ಧ ಕಿಡಿಕಾರಿದರು.

ಇನಾಂಹೊಂಗಲದ ಶ್ರೀ ಸಿದ್ಧಲಿಂಗೇಶ್ವರ ಪ್ರೌಢಶಾಲಾ ಮೈದಾನದಲ್ಲಿ ಸೋಮವಾರ ನಡೆದ ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಚಾರದಲ್ಲಿ ಮಾತನಾಡಿದ ಸಚಿವರು, ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದಿದೆ. 2014ರಿಂದ ಕೇಂದ್ರದಲ್ಲಿ ಆಡಳಿತ ಹಿಡಿದಿರುವ ಬಿಜೆಪಿ ನಾಯಕರು, ಹಲವು ಭರವಸೆಗಳನ್ನು ನೀಡಿದ್ದರು. ಆದರೆ ಒಂದೇ ಒಂದು ಭರವಸೆಯನ್ನು ಈಡೇರಿಸಿಲ್ಲ ಎಂದು ಕಿಡಿಕಾರಿದರು.

2014ರಲ್ಲಿ ಚಿನ್ನದ ಬೆಲೆ 2700 ರೂಪಾಯಿ ಇತ್ತು. 2024ರಲ್ಲಿ 7 ಸಾವಿರ ರೂಪಾಯಿ ಗಡಿ ದಾಟಿದೆ. ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿವೆ. ಜನ ಸಾಮಾನ್ಯರ ಬದುಕು ದುಸ್ತರವಾಗಿದೆ ಎಂದರು.

ಗೃಹಲಕ್ಷ್ಮಿ ಹಣ,ಉಚಿತ ಬಸ್ ಪ್ರಯಾಸದಿಂದ ಮಹಿಳೆಯರು ಇಂದು ನೆಮ್ಮದಿಯ ಜೀವನ ಸಾಗಿಸುತ್ತಿದ್ದಾರೆ. ಕೇಂದ್ರ ಸರ್ಕಾರ ನಮ್ಮ ಪಾಲಿನ ಅಕ್ಕಿ ಕೊಡದಿದ್ದರೂ ಜನರಿಗೆ ನಾವು ಅದರ ಬದಲಿಗೆ ಹಣ ಕೊಡುತ್ತಿದ್ದೇವೆ. ನಮಗೆ ಅಕ್ಕಿ ಇಲ್ಲ ಎಂದ ಕೇಂದ್ರ ಸರ್ಕಾರ, ಭಾರತ್ ರೈಸ್ ಹೆಸರಿನಲ್ಲಿ ಚುನಾವಣೆ ವೇಳೆ 29 ರೂಪಾಯಿಗೆ ನೀಡುತ್ತಿದೆ. ಉಜ್ವಲ ಹೆಸರಿನಲ್ಲಿ ಗ್ಯಾಸ್ ಸಿಲಿಂಡರ್ ಕೊಟ್ಟು, ಬೆಲೆ ಜಾಸ್ತಿ ಮಾಡಲಾಯಿತು. ಇದೀಗ ಚುನಾವಣೆ ಬಂದ ಕಾರಣ ಸಿಲಿಂಡರ್ ಬೆಲೆ ಕಡಿಮೆ ಮಾಡಲಾಗಿದೆ ಎಂದು ಡಾ.ಸುಧಾಕರ್ ಕಿಡಿಕಾರಿದರು.

ಬಿಜೆಪಿ-ಜೆಡಿಎಸ್ ಪಕ್ಷದ ನಾಯಕರಿಗೆ ಈಗಾಗಲೇ ನಡುಕ ಉಂಟಾಗಿದೆ. ಸೋಲಿನ



ಭೀತಿಯಿಂದ ಮೋದಿ ಅವರು ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದಾರೆ. ಅನ್ಯ ಧರ್ಮದ ಬಗ್ಗೆ ಕೀಳು ಮಟ್ಟದ ಭಾಷಣ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಬೆಳಗಾವಿ ಜಿಲ್ಲೆಯ ಯುವಕ, ಪ್ರೀತಿಯ ಮಂತ್ರಿಗಳ ಮಗ ಮೃಣಾಲ್ ಹೆಬ್ಬಾಳಕರ್ ಅವರನ್ನು ಬೆಂಬಲಿಸಿ, ಕಾಂಗ್ರೆಸ್ ಪಕ್ಷವನ್ನು, ರಾಜ್ಯ ಸರ್ಕಾರವನ್ನು ಬಲಪಡಿಸಬೇಕು ಎಂದು ಸಚಿವ ಸುಧಾಕರ್ ಕರೆ ನೀಡಿದರು.

**ಸವದತ್ತಿಯಲ್ಲಿ ಮೃಣಾಲ್ ಗೆ ಹೆಚ್ಚಿನ ಬೆಂಬಲ:**

ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಅವರನ್ನು ಬೆಂಬಲಿಸಿ, ಈ ಭಾಗದಲ್ಲಿ ಹೆಚ್ಚಿನ ಮತಗಳನ್ನು ನೀಡಬೇಕು. ಕ್ಷೇತ್ರದ ಸಮಸ್ಯೆ, ಸಾಮಾಜಿಕ ಸಮಸ್ಯೆಗಳನ್ನು ಅರಿತಿರುವ ವ್ಯಕ್ತಿ ಮೃಣಾಲ್ ಹೆಬ್ಬಾಳಕರ್ ಎಂದು ಸವದತ್ತಿ ಶಾಸಕ ವಿಶ್ವಾಸ್ ವೈದ್ಯ ಹೇಳಿದರು.

2014ರ ಚುನಾವಣೆಯಲ್ಲಿ ಪ್ರತಿಯೊಬ್ಬರ ಖಾತೆಗೆ 15 ಲಕ್ಷ ರೂ. ಹಾಕಲಾಗುವುದು, ಎರಡು ಕೋಟಿ ಉದ್ಯೋಗ ನೀಡಲಾಗುವುದು ಎಂದು ಹೇಳಿ ಜನರಿಗೆ ಮೋಸ ಮಾಡಿರುವ ಕೇಂದ್ರ ಸರ್ಕಾರಕ್ಕೆ ತಕ್ಕ ಪಾಠ ಕಲಿಸಬೇಕು ಎಂದು ಕರೆ ನೀಡಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಸಹಿವುಳ್ಳ ಗ್ಯಾರಂಟಿ ಕಾರ್ಡ್ ಗಳನ್ನು ಹಂಚಿದ್ದೇವೆ. ವರ್ಷಕ್ಕೆ ಒಂದು ಕುಟುಂಬಕ್ಕೆ ಇಪ್ಪತ್ತೈದು ಲಕ್ಷ ರೂ. ವಿಮೆ ನೀಡುವ ಯೋಜನೆ ಹೊಂದಿದ್ದೇವೆ. ಈ ಗ್ರಾಮದಲ್ಲಿ ನನಗಿಂತ ಹೆಚ್ಚಿನ ಮತಗಳು ಕಾಂಗ್ರೆಸ್‌ಗೆ ಬೀಳಲಿವೆ ಎಂದರು.

**ಕಾಂಗ್ರೆಸ್ ಪಕ್ಷದಿಂದ ಮಾತ್ರ ಬಡವರ ಅಭಿವೃದ್ಧಿ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್:**

ಕಾಂಗ್ರೆಸ್ ಪಕ್ಷದ ರಾಜ್ಯ ಸರ್ಕಾರ ಉತ್ತಮವಾಗಿ ಕೆಲಸ ಮಾಡುತ್ತಿದೆ. ಬೆಳಗಾವಿ ಕ್ಷೇತ್ರದಲ್ಲಿ 20 ವರ್ಷಗಳ ನಂತರ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸುವ ಅವಕಾಶ ಸಿಕ್ಕಿದೆ. ಮೃಣಾಲ್ ಹೆಬ್ಬಾಳಕರ್ ಅವರನ್ನು ಆರಿಸಿ ಕಳುಹಿಸಿಕೊಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಇಂದಿರಾಗಾಂಧಿ ಇರುವಾಗ ಉಳುವವನೆ ಭೂಮಿಯ ಒಡೆಯ ಎಂದು ಘೋಷಿಸಿದರು. ಕಾಂಗ್ರೆಸ್ ಪಕ್ಷ ಬ್ಯಾಂಕ್ ಗಳನ್ನು ರಾಷ್ಟ್ರೀಕರಣ ಮಾಡಿ, ಲೋನ್ ಮೇಳ ಮಾಡಿದರೆ, ಮೋದಿ ಸರ್ಕಾರ ಬ್ಯಾಂಕ್ ಗಳನ್ನು ಖಾಸಗೀಕರಣ ಮಾಡುತ್ತಿದೆ. ಕಾಂಗ್ರೆಸ್ ಪಕ್ಷ ಮಾಡಿದ್ದ ದೇಶದ ಆಸ್ತಿಯನ್ನು ಬಿಜೆಪಿ ಮಾರಾಟ ಮಾಡುತ್ತಿದೆ ಎಂದು ಆರೋಪಿಸಿದರು.

ಈ ಬಾರಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ, ಪಕ್ಷ ಅಧಿಕಾರಕ್ಕೆ ಬಂದರೆ ರೈತರ ಬಾಳು ಹಸನಾಗುತ್ತದೆ. ಸಾಮಾಜಿಕ ಕಳಕಳಿ ಹೊಂದಿರುವ ನನ್ನ ಮಗ ನಿಮ್ಮ ಸೇವೆ ಮಾಡಲಿದ್ದಾನೆ ಎಂದು ಹೇಳಿದರು.

ಈ ವೇಳೆ ಬಸಯ್ಯ ಹಿರೇಮಠ, ಸಂಗಪ್ಪ ಲಕ್ಕಣ್ಣವರ್, ಎಸ್. ಎಂ.ಫಕೀರಶೆಟ್ಟಿ, ರಾಮಣ್ಣ ತುರುಮರಿ, ಬಸಪ್ಪ ಅಳಗವಾಡಿ, ಕಿಟ್ಟು ಪಟ್ಟಣಶೆಟ್ಟಿ, ಬಸಪ್ಪ ಕೊಪ್ಪದ್, ರಮೇಶ್ ಬ್ಯಾಡಸೂರ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

## ಮತದಾನ ಜಾಗೃತಿ ಬೀದಿ ನಾಟಕ ಪ್ರದರ್ಶನ

## ಪ್ರಜಾಪ್ರಭುತ್ವದ ಸರ್ಕಾರ ರಚಿಸಲು ಪ್ರತಿಯೊಬ್ಬರ ಮತದಾನ ಅಮೂಲ್ಯವಾದದ್ದು; ಪಿ.ಎನ್.ಲೋಕೇಶ

ಬೆಳಗಾವಿ: ಸಂವಿಧಾನಾತ್ಮಕ ಮತದಾನ ಪ್ರತಿಯೊಬ್ಬರ ಹಕ್ಕು, ಪ್ರಜಾಪ್ರಭುತ್ವದ ಸರ್ಕಾರ ರಚಿಸಲು ಪ್ರತಿಯೊಬ್ಬರ ಮತದಾನ ಅಮೂಲ್ಯವಾದದ್ದು, ಲೋಕಸಭಾ ಚುನಾವಣೆ ಮೇ.7 ರಂದು ನಡೆಯಲಿದೆ. ಸುಭದ್ರ ಸರ್ಕಾರ ನಿರ್ಮಿಸಲು 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರು ಮತದಾನ ಹಕ್ಕು ಚಲಾಯಿಸಬೇಕು ಎಂದು ಮಹಾನಗರ ಪಾಲಿಕೆ ಆಯುಕ್ತರಾದ ಪಿ.ಎನ್. ಲೋಕೇಶ ಅವರು ಸಾರ್ವಜನಿಕರಿಗೆ ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಸ್ವೀಪ್ ಸಮಿತಿ, ಬೆಳಗಾವಿ ಮಹಾನಗರ



ಪಾಲಿಕೆ ಸಹಯೋಗದಲ್ಲಿ ಸೋಮವಾರ (ಏ.29) ನಡೆದ ಮತದಾನ ಜಾಗೃತಿ ಬೀದಿ ನಾಟಕ ಪ್ರದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯಾವುದೇ ಆಶೆ-ಆಮಿಷಗಳಿಗೆ ಒಳಗಾಗದೇ ಯೋಚಿಸಿ, ನಿರ್ಭಯದಿಂದ ಮತ ಚಲಾಯಿಸಬೇಕು ಎಂದು ಹೇಳಿದರು.

ರಂಗದರ್ಶನ ಕಲಾ ತಂಡ ದುಳಗನವಾಡಿ ಇವರು "ನನ್ನ ಮತ ಮಾರಾಟಕ್ಕಿಲ್ಲ" ಬೀದಿ ನಾಟಕ ಜಾಗೃತಿ ಹಾಡುಗಳ ಮೂಲಕ ಬೆಳಗಾವಿಯ ಕಡಿಮೆ ಮತದಾನವಾದ ಕೇಂದ್ರಗಳಲ್ಲಿ ಕಲಾ ಪ್ರದರ್ಶನ ನೀಡಿ ಮತದಾರರಿಗೆ ಮನಮುಟ್ಟುವಂತೆ ಅರಿವು ಮೂಡಿಸಿದರು.

ಕಲಾ ತಂಡದಲ್ಲಿ ಭರತ ಕಲಾಚಂದ್ರ, ಮಾರುತಿ ಕಾಮಗೌಡ, ಪುಂಡಲೀಕ ನಾಯಿಕ, ಅಪ್ಪಾಸಾಬ ಚಿಮಣೆ, ಶಂಕರ ಖೋತ, ಸುಜಾತಾ ಮಗದುಮ, ಸತ್ಯವ್ವ ಕೆಂಗಾರೆ, ಗುರುಪ್ರಸಾದ ಕಲಾಚಂದ್ರ ಭಾಗವಹಿಸಿದರು.

ಈ ವೇಳೆ ಉಪಚುನಾವಣಾಧಿಕಾರಿ ಗುರುನಾಥ ದಡ್ಡೆ, ಹಾಗೂ ನಾಗೇಶ ಕಲ್ಪತರಿ, ವಿವೇಕಾನಂದ ಮಠದ, ಉಪಸ್ಥಿತರಿದ್ದರು.

## ಜಂತರ್ ಮಂತರ್‌ನಲ್ಲಿ ಸಂವಿಧಾನ ಸುಟ್ಟುಹಾಕಿದವರ ವಿರುದ್ಧ ಮತ ಚಲಾಯಿಸಿ: ಸಚಿವ ತಿಮ್ಮಾಪೂರ



ಮುಧೋಳ: ಈ ಹಿಂದೆ ದೆಹಲಿ ಜಂತರ್ ಮಂತರ್‌ನಲ್ಲಿ ಸಂವಿಧಾನ ಪ್ರತಿಗಳನ್ನು ಸುಟ್ಟುಹಾಕಿದವರ ವಿರುದ್ಧ ಈಗ ನಡೆಯುತ್ತಿರುವ ಲೋಕಸಭಾ ಚುನಾವಣೆಯಲ್ಲಿ ಅವರ ವಿರುದ್ಧ ಮತ ಚಲಾಯಿಸುವ ಮೂಲಕ ಉತ್ತರ ನೀಡಬೇಕೆಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನಗರದ ಕತ್ತಿ ಕಲ್ಯಾಣ ಭವನದಲ್ಲಿ ನಡೆದ ಪರಿಶಿಷ್ಟ ಜಾತಿ ಕಾರ್ಯಕರ್ತರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ಹೇಳಿದ ಅಧಿಕಾರದ ಕೀ ರಾಜಕೀಯದಲ್ಲಿದೆ. ಪ್ರತಿಯೊಬ್ಬರಿಗೂ ರಾಜಕೀಯದ ಅವಶ್ಯಕತೆ ಇದೆ. ನಮ್ಮ ಬೇಕುಬೇಡಿಕೆಗಳನ್ನು ಕಾಯ್ದೆ ಕಾನೂನು ತರುವಲ್ಲಿ ರಾಜಕಾರಣ ಅತೀ ಮುಖ್ಯವಾಗಿದೆ. ನಾವೆಲ್ಲರೂ ಮತದಾನ ಮಾಡುವ ಮೂಲಕ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕೆಂದು ಅವರು ತಿಳಿಸಿದರು. ಡಾ.ಬಿ.ಆರ್. ಅಂಬೇಡ್ಕರ್ ನಿಗಮದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಎಂದೂ ಆಗದ ಸಾಲಮನ್ನಾ ಮಾಡುವ ಮೂಲಕ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಬಡವರ, ದೀನದಲಿತರ ಉದ್ಧಾರಕ್ಕಾಗಿ ಕಾರ್ಯ ಮಾಡುತ್ತಿದ್ದಾರೆ. ಅಲ್ಲದೇ ಕಾಂಟ್ರಾಕ್ಟ್‌ನಲ್ಲಿಯೂ ಮೀಸಲಾತಿಯನ್ನು ಅವರು ಜಾರಿಗೆ ತಂದರು. ನಮ್ಮ ನಡೆ ನುಡಿಗಳೆಲ್ಲ ಅಭಿವೃದ್ಧಿ ಕಡೆಗಿರಬೇಕು. ನಿಮ್ಮ ಅಭಿವೃದ್ಧಿಗೆ ನಾನೂ ಸಹ ಬದ್ಧನಾಗಿದ್ದೇನೆ ಎಂದು ತಿಮ್ಮಾಪೂರ ತಿಳಿಸಿದರು.

ಈ ಹಿಂದೆ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಎಸ್‌ಸಿ, ಎಸ್‌ಟಿ ಸಾಲ ಸೌಲಭ್ಯಗಳನ್ನು ನೀಡುವ ಸಬ್ಸಿಡಿಯಲ್ಲಿ 50% ಕಡಿಮೆ ಮಾಡಿದರು. ಕೋಮುವಾದಿ ಬಿಜೆಪಿ ಸರ್ಕಾರ ಹಲವಾರು ಸಂವಿದಾನದ ಬಗ್ಗೆ ಹಗುರವಾಗಿ ಮಾತನಾಡುವುದು ಸಂವಿಧಾನಕ್ಕೆ ಎಸಗುತ್ತಿರುವ ಅಪಚಾರವಾಗಿದೆ. ನಾನು ಈ ಕ್ಷೇತ್ರವನ್ನು ಎಂದಿಗೂ ಬಿಟ್ಟು ಹೋಗುವುದಿಲ್ಲ. ನಾನು ಸೋಲಲಿ, ಗೆಲ್ಲಲಿ, ಅಧಿಕಾರವಿಲ್ಲದಿರಲಿ, ಅಧಿಕಾರದಲ್ಲಿರಲಿ ನಾನು ಮಾತ್ರ ಈ ಕ್ಷೇತ್ರವನ್ನು ಯಾವುದೇ ಕಾರಣಕ್ಕೂ ಬಿಟ್ಟು ಓಡಿ ಹೋಗುವುದಿಲ್ಲ ಎಂದು ಅವರು ಪರೋಕ್ಷವಾಗಿ ಮಾಜಿ ಸಚಿವ, ಚಿತ್ರದುರ್ಗ ಲೋಕಸಭಾ ಅಭ್ಯರ್ಥಿ ಗೋವಿಂದ ಕಾರಜೋಳ ಹೆಸರು ತೆಗೆದುಕೊಳ್ಳದೇ ಲಘುವಾಗಿ ಟೀಕಿಸಿದರು.

ಬರುವ ಮೇ 7 ರಂದು ನಡೆಯಲಿರುವ ಮತದಾನ ಸಂದರ್ಭದಲ್ಲಿ ನೀವೆಲ್ಲರೂ ಬಾಗಲಕೋಟೆ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಅವರಿಗೆ ಮತ ಚಲಾಯಿಸುವ ಮೂಲಕ ಅವರನ್ನು ಪ್ರಚಂಡ ಬಹುಮತದಿಂದ ಆರಿಸಿ ತರಬೇಕೆಂದು ಹೇಳಿದರು. ಗ್ರಾಮೀಣ ಪ್ರದೇಶದಲ್ಲಿ ಮನೆ-ಮನೆಗೆ ತೆರಳಿ ಸರ್ಕಾರದ ಗ್ಯಾರಂಟಿಗಳ ಮತದಾರರಿಗೆ ಮಾಹಿತಿ ನೀಡಿ ಮತ ಯಾಚಿಸಬೇಕೆಂದು ಅವರು ಕಾರ್ಯಕರ್ತರಿಗೆ ಕರೆ ನೀಡಿದರು.

## ಮಾವು ಬೆಳೆಗಾರರಿಂದ ಮಳಿಗೆ ಹಾಕಲು ಅರ್ಜಿ ಆಹ್ವಾನ

ಧಾರವಾಡ: ತೋಟಗಾರಿಕೆ ಇಲಾಖೆ ಆವರಣದಲ್ಲಿ ಮೇ 14 ರಿಂದ ಮೇ 16, 2024 ರವರೆಗೆ ಪ್ರಸಕ್ತ ಸಾಲಿನ ಮಾವು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಆಯೋಜಿಸಲಾಗಿದ್ದು, ಮಳಿಗೆ ಹಾಕಲು ಇಚ್ಚಿಸುವ ಮಾವು ಬೆಳೆಗಾರರಿಂದ ಅರ್ಜಿ ಅಹ್ವಾನಿಸಲಾಗಿದೆ.

ಆಸಕ್ತಿವುಳ್ಳ ಮಾವು ಬೆಳೆಗಾರರು ನಿಗದಿತ ಅರ್ಜಿಯನ್ನು ಆಯಾ ತಾಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯಿಂದ ಪಡೆದು, ಬೆಳೆ ದೃಡೀಕರಣ, ಎಫ್‌ಐಡಿ ಸಂಖ್ಯೆ ಹಾಗೂ ಪಹಣಿಯೊಂದಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ) ಧಾರವಾಡ ಇವರ ಕಛೇರಿಗೆ ಮೇ 9, 2024 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0836-2746334 ಗೆ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದ್ವಿತೀಯ ಪಿಯು ವಾರ್ಷಿಕ ಪರೀಕ್ಷೆ-2

### ಇತಿಹಾಸ ಮತ್ತು ಭೌತಶಾಸ್ತ್ರದ ವಿಷಯದಲ್ಲಿ ಒಟ್ಟು 2790 ವಿದ್ಯಾರ್ಥಿಗಳು ಹಾಜರು, 285 ವಿದ್ಯಾರ್ಥಿಗಳು ಗೈರು ಹಾಜರು

ಧಾರವಾಡ: ಏ.30 ಬೆಳಿಗ್ಗೆ ಜಿಲ್ಲೆಯಲ್ಲಿ ನಡೆದ ದ್ವಿತೀಯ ಪಿಯು ವಾರ್ಷಿಕ ಪರೀಕ್ಷೆ -2 ರ ಇತಿಹಾಸ ಮತ್ತು ಭೌತಶಾಸ್ತ್ರ ವಿಷಯಗಳ ಪರೀಕ್ಷೆಗೆ ಜಿಲ್ಲೆಯ 12 ಪರೀಕ್ಷಾ ಕೇಂದ್ರಗಳಲ್ಲಿ ಇತಿಹಾಸ ವಿಷಯಕ್ಕೆ ನೋಂದಾಯಿತರಾಗಿದ್ದ ಒಟ್ಟು 799 ವಿದ್ಯಾರ್ಥಿಗಳ ಪೈಕಿ 715 ವಿದ್ಯಾರ್ಥಿಗಳು ಹಾಜರಾಗಿದ್ದರು. ಮತ್ತು 89 ವಿದ್ಯಾರ್ಥಿಗಳು ಗೈರು ಹಾಜರು ಉಳಿದಿದ್ದಾರೆ.

ಭೌತಶಾಸ್ತ್ರ ವಿಷಯಕ್ಕೆ ನೋಂದಾಯಿತರಾಗಿದ್ದ ಒಟ್ಟು 2276 ವಿದ್ಯಾರ್ಥಿಗಳ ಪೈಕಿ 2075 ವಿದ್ಯಾರ್ಥಿಗಳು ಹಾಜರಾಗಿದ್ದರು. ಮತ್ತು 201 ವಿದ್ಯಾರ್ಥಿಗಳು ಗೈರು ಹಾಜರು ಉಳಿದಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ್ ಕೆ.ಪಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ 02 ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಮತದಾನ ಜಾಗೃತಿ ಕುರಿತು 'ಪ್ರತಿಜ್ಞಾವಿಧಿ ಭೋದನೆ' ಕಾರ್ಯಕ್ರಮ

ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮತದಾನ ಜಾಗೃತಿ ಕುರಿತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಏ.02 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತಾಳೂರು ರಸ್ತೆಯಲ್ಲಿರುವ ಹೊಸ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಆವರಣದಲ್ಲಿ 'ಪ್ರತಿಜ್ಞಾವಿಧಿ ಭೋದನೆ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಎಸ್. ಹೆಚ್.ಪುಷ್ಪಾಂಜಲಿ ದೇವಿ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಈ ವೇಳೆ ಜಿಲ್ಲಾ ನ್ಯಾಯಾಲಯದ ವಿವಿಧ ನ್ಯಾಯಾಧೀಶರು ಭಾಗವಹಿಸುವರು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಕಾವ್ಯ ಕಮ್ಮಟ ಏರ್ಪಡಿಸಲು ನಿರ್ಧಾರ: ವಿದ್ಯಾಧರ ಮುತಾಲಿಕ್ ದೇಸಾಯಿ

ಬೆಳಗಾವಿ: ವಿದ್ಯಾಧರ ಕನ್ನಡ ಪ್ರತಿಷ್ಠಾನ ಧಾರವಾಡ, ಮುಂಬೈ, ತೆಲಂಗಾಣ ಮತ್ತು ಹೊಂಬೆಳಕು ಸಾಂಸ್ಕೃತಿಕ ಸಂಘ ಬೆಳಗಾವಿ ಇವರ ಸಹಯೋಗದಲ್ಲಿ ಏರ್ಪಡಿಸಿದ ಕನ್ನಡ ನುಡಿ ತೇರು 2024ರ ನಿಮಿತ್ಯ ಹಮ್ಮಿಕೊಂಡ ಪಾಲಕರಿಗೆ ಸನ್ಮಾನ, ಸಾಧಕರಿಗೆ ಸನ್ಮಾನ, ಪ್ರಶಸ್ತಿ ಗೌರವ ಅರ್ಪಣೆ, ಕವಿಗೋಷ್ಠಿ, ಕೃತಿಗಳ ಬಿಡುಗಡೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ವಿದ್ಯಾಧರ ಮುತಾಲಿಕ ದೇಸಾಯಿ ಅವರು, ಇಂದಿನ ಯುವ ಪೀಳಿಗೆಗೆ ಕಾವ್ಯದ ಪರಂಪರೆ ಮತ್ತು ಕಾವ್ಯ ರಚನೆ ತಿಳುವಳಿಕೆ ಮೂಡಿಸುವುದು ಕಾವ್ಯ ಕಮ್ಮಟ ಏರ್ಪಡಿಸುವುದು ಅಗತ್ಯ ಎಂದರು. ಈ ದಿಸೆಯಲ್ಲಿ ನಮ್ಮ ಪ್ರತಿಷ್ಠಾನ ಸದ್ಯದಲ್ಲಿಯೇ ಒಂದು ಕಾವ್ಯ ಕಮ್ಮಟ ಏರ್ಪಡಿಸುವುದನ್ನು ಘೋಷಿಸಿದರು.

ಇದೇ ಸಮಾರಂಭದಲ್ಲಿ ಡಾ. ಶ್ಯಾಮಲಾ ಪ್ರಕಾಶ ಅವರು, ರಚಿಸಿದ



ಮಾತಿನೊಳಗಿನ ಧಾತು ದಾಸ ಸಾಹಿತ್ಯ ಮತ್ತು ಸಂಗೀತ ಚಿತ್ರಣಗಳು ಎಂಬ ಕೃತಿಯನ್ನು ಸ.ರಾ.ಸುಳಕುಡೆ ಅವರು ಬಿಡುಗಡೆಗೊಳಿಸಿದರು. ವಿದೂಷಿ ಡಾ. ಶ್ಯಾಮಲಾ ಪ್ರಕಾಶ ಅವರು ಈ ಕೃತಿಯಲ್ಲಿ ದಾಸ ಸಾಹಿತ್ಯದಲ್ಲಿ ಮೂಡಿ ಬಂದಿರುವ ಸಂಗೀತ ಚಿತ್ರಣಗಳನ್ನು ಸಮಗ್ರವಾಗಿ ವಿಶ್ಲೇಷಿಸಿದ್ದನ್ನು ಶ್ಲಾಘಿಸಿದರು.

ಕಥೆ ಹೇಳುವೆ ಮತ್ತು ಆಯ್ದ ಇತರ ಕತೆಗಳು ಕೃತಿಯನ್ನು ಕಸಾಪದ ಅಧ್ಯಕ್ಷರಾದ ಮಂಗಳಾ ಮೆಟಗುಡ್ಡ ಬಿಡುಗಡೆಗೊಳಿಸಿದರು. ಬೆಳಗಾವಿ ಜಿಲ್ಲೆಯಲ್ಲಿ ಕಸಾಪ ಹಮ್ಮಿಕೊಂಡ ವಿವಿಧ ಕಾರ್ಯಕ್ರಮಗಳನ್ನು ವಿವರಿಸಿದರು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಾದ ಶಿವಾಜಿ ಕಾಗಣೇಕರ, ಮಂಗಳಾ ಮೆಟಗುಡ್ಡ, ಸ.ರಾ.ಸುಳಕುಡೆ, ಎಂ. ವೈ.ಮೆಣಸಿಣಕಾಯಿ, ಆರ್.ಬಿ.ಬನಶಂಕರಿ, ಶೋಭಾ ಅ ಮೇಟಿ, ಇವರಿಗೆ ವಿವಿಧ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಯಿತು.

ಈ ಸಮಾರಂಭದಲ್ಲಿ ಕವಿಗೋಷ್ಠಿಯ ಅಧ್ಯಕ್ಷತೆಯನ್ನು ವಹಿಸಿದ ಸರಸ್ವತಿ ಆರ್. ಕಳಸದ ಅವರು ಸಮಕಾಲೀನ ಕಾವ್ಯ ಕುರಿತು ವಿಶ್ಲೇಷಿಸಿದರು. ಸಮಕಾಲೀನ ಕನ್ನಡ ಮತ್ತು ಕಾವ್ಯ ಕುರಿತು ಬೆಂಗಳೂರಿನ ಮುದಲ್ ವಿಜಯ ಇವರು ವಿಶೇಷ ಉಪನ್ಯಾಸ ನೀಡಿ ಇಂದಿನ ಬಹುಪಾಲು ಕವಿಗಳು ವಾಚ್ಯ ಕವಿತೆಗಳನ್ನು ರಚಿಸುತ್ತಿರುವುದು ಕಂಡು ಬರುತ್ತದೆ. ಆದ ಕಾರಣ ಅವರಿಗೆ ಒಂದು ಕಾವ್ಯ ಕಮ್ಮಟ ಏರ್ಪಡಿಸುವುದು ಅಗತ್ಯ ಎಂದರು.

ಕವಿ ಸಮ್ಮೇಳನವನ್ನು ಉದ್ಘಾಟಿಸಿದ ಗಣಪತಿ ಹೆಗಡೆ ಇವರು, ಕನ್ನಡ ಕಾವ್ಯ ನಡೆದುಬಂದ ದಾರಿಯನ್ನು ವಿವರಿಸಿದರು. ಈ ಸಮಾರಂಭದಲ್ಲಿ ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ 20 ಆಯ್ದ ಕವಿಗಳಿಗೆ ಬಹುಮಾನ ನೀಡಿ ಗೌರವಿಸಲಾಯಿತು.

ಮುಖ್ಯ ಅತಿಥಿಗಳಾಗಿ ಸಮಾರಂಭದಲ್ಲಿ ಭಾಗವಹಿಸಿದ ಸುರೇಶ ಕೋರಕೊಪ್ಪ ಇವರು ಕನ್ನಡ ಕಾವ್ಯ ಪರಂಪರೆಯಲ್ಲಿ ವಚನ ಸಾಹಿತ್ಯ ಮತ್ತು ದಾಸ ಸಾಹಿತ್ಯಕ್ಕೆ ವಿಶೇಷ ಮಹತ್ವವಿದೆ. ಆದುನಿಕ ಕನ್ನಡ ಕವಿಗಳ ಕಾವ್ಯದಲ್ಲಿಯೂ ಕಾವ್ಯಾಂಶಗಳಿವೆ. ಅವುಗಳನ್ನು ಇಂದಿನ ಕವಿಗಳು ಅಧ್ಯಯನ ಮಾಡುವುದು ಅಗತ್ಯ ಎಂದರು.

ವಿದ್ಯಾಧರ ಪ್ರತಿಷ್ಠಾನದ ಸದಸ್ಯರಾದ ಸುನೀತಾ ಪ್ರಕಾಶ, ಸುರೇಶ ರಾಜಮಾನೆ, ಎನ್.ಆರ್.ಶೋಭಾ, ಜಾನರ್ ಇವರ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ಈ ಕಾರ್ಯಕ್ರಮವನ್ನು ಸುನೀತಾ ಪ್ರಕಾಶ ಅವರು ನಿರೂಪಿಸಿದರು. ಸುರೇಶ ರಾಜಮಾನೆ ಅವರು ವಂದಿಸಿದರು.

# ಶ್ರೀ ಕೆ ವಿ ಕಾಮತ್ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನಕ್ಕಾಗಿ ವಿಶೇಷ ಘಟಿಕೋತ್ಸವ

ಮಣಿಪಾಲ: ಮಣಿಪಾಲ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ (MAHE), ಪರಿಗಣಿತ ವಿಶ್ವವಿದ್ಯಾನಿಲಯ, ಇದು ಭಾರತದ ಪ್ರಮುಖ ಸಂಶೋಧನಾ ಕೇಂದ್ರಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾಗಿದೆ, ಇದು ಶ್ರೀ ಕೆ.ವಿ.ಕಾಮತ್, ಅಧ್ಯಕ್ಷರು ರಾಷ್ಟ್ರೀಯ ಬ್ಯಾಂಕ್ - ಹಣಕಾಸು ಮೂಲಸೌಕರ್ಯ ಮತ್ತು ಅಭಿವೃದ್ಧಿ (NaBFID) ಮತ್ತು ಅಧ್ಯಕ್ಷರು - ಜಿಯೋ ಫೈನಾನ್ಶಿಯಲ್ ಸರ್ವೀಸಸ್ ಲಿಮಿಟೆಡ್ ಅವರಿಗೆ ಗೌರವ ಡಾಕ್ಟರೇಟ್ ನೀಡಲು ವಿಶೇಷ ಘಟಿಕೋತ್ಸವವನ್ನು ಸೋಮವಾರ, 29 ಏಪ್ರಿಲ್ 2024 ನಡೆಸಿತು. ಸಮಾರಂಭದಲ್ಲಿ ಗಣ್ಯರಾದ ಶ್ರೀಮತಿ ವಾಸಂತಿ ಆರ್ ಪೈ, ಟ್ರಸ್ಟಿ, ಮಾಹೆ ಟ್ರಸ್ಟ್, ಡಾ ರಂಜನ್ ಆರ್ ಪೈ, ಅಧ್ಯಕ್ಷರು, ಮಾಹೆ ಟ್ರಸ್ಟ್ ಮತ್ತು ಅಧ್ಯಕ್ಷರು, ಎಂಇಎಂಜಿ, ಬೆಂಗಳೂರು, ಡಾ ಎಚ್.ಎಸ್. ಬಲ್ಲಾಳ್, ಮಾಹೆಯ ಪ್ರೊ-ಚಾನ್ಸಲರ್, ಲೆಫ್ಟಿನೆಂಟ್ ಜನರಲ್ (ಡಾ) ಎಂ.ಡಿ. ವೆಂಕಟೇಶ್, ಮಾಹೆಯ ಉಪಕುಲಪತಿ ವಿಎಸ್‌ಎಂ (ನಿವೃತ್ತ), ಡಾ. ದಿಲೀಪ್ ಜಿ ನಾಯಕ್, ಪ್ರೊ ವೈಸ್ ಚಾನ್ಸಲರ್, ಮಾಹೆ, ಮಂಗಳೂರು, ಡಾ. ಪಿ ಗಿರಿಧರ್ ಕಿಣಿ, ಮಾಹೆಯ ರಿಜಿಸ್ಟ್ರಾರ್, ಮಾಹೆ ಟ್ರಸ್ಟ್, ಆಡಳಿತ ಮಂಡಳಿ ಮತ್ತು ಅಕಾಡೆಮಿಕ್ ಕೌನ್ಸಿಲ್‌ನ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಶ್ರೀ ಕೆ.ವಿ. ಕಾಮತ್, ಪ್ರಸ್ತುತ ರಾಷ್ಟ್ರೀಯ ಬ್ಯಾಂಕ್ - ಹಣಕಾಸು ಮೂಲಸೌಕರ್ಯ ಮತ್ತು ಅಭಿವೃದ್ಧಿ(NaBFID) ಮತ್ತು ಜಿಯೋ ಫೈನಾನ್ಶಿಯಲ್ ಸರ್ವೀಸಸ್ ಲಿಮಿಟೆಡ್‌ನಲ್ಲಿ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ, ಅವರು ದೂರದೃಷ್ಟಿಯ ನಾಯಕ ಮತ್ತು ಬ್ಯಾಂಕಿಂಗ್ ಮತ್ತು ಹಣಕಾಸು ಕ್ಷೇತ್ರದಲ್ಲಿ ಪ್ರವರ್ತಕರಾಗಿದ್ದಾರೆ. ಅವರ ಕೊಡುಗೆಗಳು ಭಾರತದಲ್ಲಿನ ಕೈಗಾರಿಕೆಗಳನ್ನು ಪರಿವರ್ತಿಸಿದ್ದು ಮಾತ್ರವಲ್ಲದೆ ಜಾಗತಿಕ ಆರ್ಥಿಕ ಭೂದೃಶ್ಯದ ಮೇಲೆ ಪ್ರಭಾವ ಬೀರಿವೆ, ಉದ್ಯಮಕ್ಕೆ ಹೊಸ ಮಾನದಂಡಗಳನ್ನು




ಹೊಂದಿಸಿವೆ. ಅವರ ಗಮನಾರ್ಹ ಪಥ - ಹಿಂದೆ ನ್ಯೂ ಡೆವಲಪ್‌ಮೆಂಟ್ ಬ್ಯಾಂಕ್ (NDB) ನ ಅಧ್ಯಕ್ಷರಾಗಿ ಮತ್ತು ICICI ಬ್ಯಾಂಕ್‌ನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದು - ಅನುಕರಣೀಯ ನಾಯಕತ್ವ, ಕಾರ್ಯತಂತ್ರದ ಕುಶಾಗ್ರಮತಿ ಮತ್ತು ನಾವೀನ್ಯತೆಯಿಂದ ಗುರುತಿಸಲ್ಪಟ್ಟಿದೆ, ಇದು ಅವರ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಶ್ರೇಷ್ಠತೆಗೆ ಸಾಕ್ಷಿಯಾಗಿದೆ. ಅವರ ವೃತ್ತಿಪರ ಸಾಧನೆಗಳನ್ನು ಮೀರಿ, ಶ್ರೀ ಕಾಮತ್ ಅವರು ಸಾಮಾಜಿಕ ಜವಾಬ್ದಾರಿ ಮತ್ತು ಸುಸ್ಥಿರ ಅಭಿವೃದ್ಧಿಗೆ ಆಳವಾಗಿ ಬದ್ಧರಾಗಿದ್ದಾರೆ. ಅವರು ತಮ್ಮ ವೃತ್ತಿಜೀವನದುದ್ದಕ್ಕೂ ಅಂತರ್ಗತ ಬೆಳವಣಿಗೆ, ಪರಿಸರ ಸುಸ್ಥಿರತೆ ಮತ್ತು ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ ಅಭ್ಯಾಸಗಳನ್ನು ಉತ್ತೇಜಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ.

ಮಾಹೆಯ ಪ್ರೊ-ಚಾನ್ಸಲರ್ ಡಾ. ಎಚ್.ಎಸ್. ಬಲ್ಲಾಳ್ ಮಾತನಾಡಿ, "ಇಂದು, ಶ್ರೀ ಕೆ.ವಿ. ಕಾಮತ್ ಅವರ ಅಸಾಧಾರಣ ಕೊಡುಗೆಗಳನ್ನು ಗುರುತಿಸಲು ಮಾಹೆ ಅಪಾರ ಹೆಮ್ಮೆಪಡುತ್ತದೆ. ಅವರ ನಾಯಕತ್ವ ಮತ್ತು ದೃಷ್ಟಿ ಯುವ ನಾಯಕರಲ್ಲಿ ನಾವೀನ್ಯತೆಯನ್ನು ಬೆಳೆಸುವ ಮಾಹೆಯ ಉದ್ದೇಶದೊಂದಿಗೆ ಸಂಪೂರ್ಣವಾಗಿ ಹೊಂದಿಕೊಳ್ಳುತ್ತದೆ. ಈ ಗೌರವ ಡಾಕ್ಟರೇಟ್ ಶ್ರೀ ಕಾಮತ್ ಅವರು ಬೀರಿದ ಆಳವಾದ ಪ್ರಭಾವವನ್ನು ಸೂಚಿಸುತ್ತದೆ ಮತ್ತು ಅವರ ಉದಾಹರಣೆಯು ನಮ್ಮ ವಿದ್ಯಾರ್ಥಿಗಳಿಗೆ ಅವರು ಆಯ್ಕೆ ಮಾಡಿದ ಕ್ಷೇತ್ರಗಳಲ್ಲಿ ಶ್ರೇಷ್ಠತೆಯನ್ನು ಮುಂದುವರಿಸಲು ಪ್ರೇರೇಪಿಸುತ್ತದೆ ಎಂದು ನಮಗೆ ವಿಶ್ವಾಸವಿದೆ. ಈ ಅರ್ಹ ಗೌರವಕ್ಕೆ ಶ್ರೀ ಕಾಮತ್ ಅವರಿಗೆ ಅಭಿನಂದನೆಗಳು.

ಮಾಹೆಯ ಉಪಕುಲಪತಿಗಳಾದ ಲೆಫ್ಟಿನೆಂಟ್ ಜನರಲ್ (ಡಾ) ಎಂ.ಡಿ. ವೆಂಕಟೇಶ್, ವಿಎಸ್‌ಎಂ (ನಿವೃತ್ತ), "ಇಡೀ ಮಾಹೆ ಸಮುದಾಯದ ಪರವಾಗಿ, ಶ್ರೀ ಕೆ.ವಿ.ಕಾಮತ್ ಅವರಿಗೆ ಈ ಗೌರವ ಡಾಕ್ಟರೇಟ್ ನೀಡುವುದು ನನ್ನ ವಿಶಿಷ್ಟ ಗೌರವವಾಗಿದೆ. ಅವರ ಗಮನಾರ್ಹ ಸಾಧನೆಗಳು ನಮ್ಮ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಿಗೆ ಸಮಾನವಾಗಿ ಸ್ಫೂರ್ತಿಯಾಗಿ ಕಾರ್ಯನಿರ್ವಹಿಸುತ್ತವೆ. ಶ್ರೀ ಕಾಮತ್ ಅವರ ಒಳನೋಟಗಳು ಮತ್ತು ಅನುಭವಗಳು ಭವಿಷ್ಯದ ನಾಯಕರನ್ನು ರೂಪಿಸಲು ಮತ್ತು ಜಗತ್ತಿನಲ್ಲಿ ಸಕಾರಾತ್ಮಕ ಬದಲಾವಣೆಗೆ ಕೊಡುಗೆ ನೀಡುವುದನ್ನು ಮುಂದುವರಿಸುತ್ತದೆ ಎಂದು ನಮಗೆ ವಿಶ್ವಾಸವಿದೆ. ಮಾಹೆಯ ಗೌರವ ಡಾಕ್ಟರೇಟ್‌ಗಳ ಗೌರವಾನ್ವಿತ ಕಂಪನಿಗೆ ಅವರನ್ನು ಸ್ವಾಗತಿಸಲು ನಾವು ಸಂತೋಷಪಡುತ್ತೇವೆ.

ಮಾನ್ಯತೆ ಕುರಿತು ಮಾತನಾಡಿದ ಶ್ರೀ ಕಾಮತ್, "ಮಾಹೆಯಿಂದ ಈ ಗೌರವ ಡಾಕ್ಟರೇಟ್ ಪಡೆದಿರುವುದು ನಾನು ತುಂಬಾ ಗೌರವಿಸುವ ವಿನಮ್ರ ಮನ್ನಣೆಯಾಗಿದೆ. ಇಷ್ಟು ದಿನ ನಾನು ಮೆಚ್ಚಿದ ಸಂಸ್ಥೆಯಲ್ಲಿ ನಿಂತಿರುವುದು ನನ್ನ ಗೌರವ. ಕೇವಲ ಬೆರಳೆಣಿಕೆಯಷ್ಟು ಸಂಸ್ಥೆಗಳಿದ್ದ ಕಾಲದಲ್ಲಿ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಲು ಯೋಚಿಸಿದ ಡಾ ಟಿಎಂಎ ಪೈ ಅವರ ಸೃಜನಶೀಲ ಚಿಂತನೆಗೆ ಈ ಸಂಸ್ಥೆ ಗೌರವವಾಗಿದೆ. ನನ್ನ ವೃತ್ತಿಜೀವನದುದ್ದಕ್ಕೂ, ನಾನು ಭಾರತದ ಸಂಸ್ಥೆಗಳನ್ನು ಜಾಗತಿಕ ಭೂಪಟದಲ್ಲಿ ಇರಿಸಲು ಮತ್ತು ಸುಸ್ಥಿರ ಅಭಿವೃದ್ಧಿಗಾಗಿ ಪ್ರತಿಪಾದಿಸಲು ಶ್ರಮಿಸಿದ್ದೇನೆ ಮತ್ತು ಮಾಹೆಯಂತಹ ಗೌರವಾನ್ವಿತ ಸಂಸ್ಥೆಯಿಂದ ಗುರುತಿಸಲ್ಪಟ್ಟಿರುವುದು ನನ್ನನ್ನು ಇನ್ನಷ್ಟು ಪ್ರೇರೇಪಿಸುತ್ತದೆ. ಈ ಮನ್ನಣೆ ನನಗೆ ಮಾತ್ರವಲ್ಲ, ಈ ಪ್ರಯಾಣದಲ್ಲಿ ನನ್ನೊಂದಿಗೆ ಸಹಕರಿಸಿದ ಎಲ್ಲರಿಗೂ. ಇದೊಂದು ಮಹತ್ತರವಾದ ಗೌರವ, ಮತ್ತು MAHE ನನ್ನ ಮೇಲೆ ಇಟ್ಟಿರುವ ನಂಬಿಕೆಗೆ ನಾನು ಆಭಾರಿಯಾಗಿದ್ದೇನೆ.

# ಭವಿಷ್ಯ ಬದಲಿಸುವ ಚುನಾವಣೆ: ಸಚಿವ ಸತೀಶ್ ಜಾರಕಿಹೊಳಿ

ಗೋಕಾಕ್: ಈ ಚುನಾವಣೆ ಕೇವಲ ಎರಡು ಅಭ್ಯರ್ಥಿಗಳ ನಡುವೆ ನಡೆಯುತ್ತಿರುವ ಚುನಾವಣೆ ಅಲ್ಲ. ಇಡೀ ದೇಶದ ಭವಿಷ್ಯ ಬದಲಿಸುವ ಚುನಾವಣೆ ಇದಾಗಿದೆ. ಗೋಕಾಕ್, ಅರಭಾವಿ ಭಾಗದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬೋಣ, ಎಲ್ಲರೂ ಒಗ್ಗೂಡಿ ಚುನಾವಣೆ ಎದುರಿಸೋಣ. ಇದೊಂದು ಐತಿಹಾಸಿಕ ಚುನಾವಣೆಯಾಗಿದ್ದು, ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ರಚಿಸೋಣ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಕರೆ ನೀಡಿದರು.

ಗೋಕಾಕ ನಗರದ ವಾಲ್ಮೀಕಿ ಕ್ರೀಡಾಂಗಣದಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಹಮ್ಮಿಕೊಂಡಿದ್ದ ಗೋಕಾಕ ಮತ್ತು ಅರಭಾವಿ ವಿಧಾನಸಭೆ ಮತಕ್ಷೇತ್ರದ ಪ್ರಜಾಧ್ವನಿ 2 ಸಮಾವೇಶವನ್ನು ಡೋಲು ಬಾರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಅಥಣಿ ಕ್ಷೇತ್ರದ ಶಾಸಕ ಲಕ್ಷ್ಮಣ್ ಸವದಿ ಮಾತನಾಡಿ, ಕಳೆದ ವಿಧಾನಸಭಾ ಚುನಾವಣೆಗೂ ಮುನ್ನ ಕಾಂಗ್ರೆಸ್ ಪಕ್ಷ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿತು. ಈ ಮೂಲಕ ನುಡಿದಂತೆ ನಡೆಯುವ ಪಕ್ಷ ಕಾಂಗ್ರೆಸ್ ಎಂದು ಸಾಬೀತು ಪಡಿಸಿತು. ಆದರೆ, 10 ವರ್ಷಗಳಿಂದ ಕೇಂದ್ರದಲ್ಲಿರುವ ಬಿಜೆಪಿ ಕೊಟ್ಟ ಒಂದೇ ಒಂದು ಭರವಸೆಯನ್ನು ಈಡೇರಿಸಿಲ್ಲ. ಜನರ ಬಳಿ ಹೋಗಿ ಮತ ಕೇಳಲು ಬಿಜೆಪಿಯವರಿಗೆ ನೈತಿಕ ಹಕ್ಕಿಲ್ಲ ಎಂದು ಮಾಜಿ ಉಪ ಮುಖ್ಯಮಂತ್ರಿ ಹಾಗೂ ಅಥಣಿ ಕ್ಷೇತ್ರದ ಶಾಸಕ ಲಕ್ಷ್ಮಣ್ ಸವದಿ ಆರೋಪಿಸಿದರು.

ಗೋಕಾಕ್ ನಲ್ಲಿ ಮಂಗಳವಾರ ನಡೆದ ಪ್ರಜಾಧ್ವನಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್



ಅಭ್ಯರ್ಥಿ ಗೆಲುವಿಗೆ ಎಲ್ಲರೂ ಸಹಕರಿಸಬೇಕು. ಎಲ್ಲರೂ ಕಂಕಣ ಬದ್ಧರಾಗಿ, ಮತ ಕೇಳಲು ನಮಗೆ ನೈತಿಕ ಹಕ್ಕಿದೆ. ಏಕೆಂದರೆ, ಚುನಾವಣೆಗೂ ಮೊದಲು ಕಾಂಗ್ರೆಸ್ ಪಕ್ಷ ಕೊಟ್ಟಿದ್ದ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ಹೀಗಾಗಿ ನಮಗೆ ನೈತಿಕತೆ ಇದೆ ಎಂದು ಹೇಳಿದರು.

2014ರಲ್ಲಿ ವಿವಿಧ ಆಶ್ವಾಸನೆಗಳನ್ನು ಕೊಟ್ಟು ಅಧಿಕಾರಕ್ಕೇರಿದ್ದ ಬಿಜೆಪಿ ಒಂದೇ ಒಂದು ಭರವಸೆಯನ್ನು ಈಡೇರಿಸಿಲ್ಲ. ಸ್ವಿಸ್ ಬ್ಯಾಂಕ್ ನಲ್ಲಿರುವ ಹಣ ತಂದರೆ, ಭಾರತ ದೇಶದಲ್ಲಿ ಸಾಲ ತೀರಿಸಬಹುದು, ಉಳಿದ ಹಣದಲ್ಲಿ ಐದು ವರ್ಷ ದೇಶದ ಬಜೆಟ್ ಮಂಡಿಸಬಹುದು. ಜೊತೆಗೆ ಚಿನ್ನದ ರಸ್ತೆ ಮಾಡಬಹುದು ಅಂತ ಚಕ್ರವರ್ತಿ ಸೂಲಿಬೆಲೆ ಎಂಬ ವ್ಯಕ್ತಿ ಹೇಳಿದ್ದೇ ಹೇಳಿದ್ದು. ಆ ಭರವಸೆಗಳೆಲ್ಲಾ ಎಲ್ಲಿ ಹೋದವು ಎಂದು ಸವದಿ ಪ್ರಶ್ನಿಸಿದರು.

ಶಿವಮೊಗ್ಗಕ್ಕೆ ಬುಲೆಟಿನ್ ಟ್ರೈನ್ ಬರಲಿಲ್ಲ. ಬದಲಿಗೆ ಯಡಿಯೂರಪ್ಪ ಮಗನ ರಾಜ್ಯಾಧ್ಯಕ್ಷ ಮಾಡಿದ್ರು. ನದಿಜೋಡಣೆ ಆಗಲಿಲ್ಲ, ಬುಲೆಟ್ ಟ್ರೈನ್ ಬರಲಿಲ್ಲ. ರೈತರ ಆದಾಯ ಡಬಲ್ ಆಗಲಿಲ್ಲ. ಈ ಭಾಗದ ಕಬ್ಬು ಬೆಳೆಗಾರರ ಹಿತರಕ್ಷಣೆ ಕಾಪಾಡಲು ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ. ರೈತರ ಉದ್ಧಾರಕ್ಕಿಂತ ಅಂಬಾನಿ, ಅದಾನಿಯೇ ಕೇಂದ್ರ ಸರ್ಕಾರಕ್ಕೆ ಮುಖ್ಯ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಶಾಸಕಿ ನಯನಾ ಮೊಟಮ್ಮಾ, ಶಾಸಕ ಆಸೀಪ್ ( ರಾಜು) ಸೇಠ್, ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ, ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಗ್ರಾಮೀಣ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ಭೋವಿ ನಿಗಮದ ಅಧ್ಯಕ್ಷ ರವಿಕುಮಾರ್, ಕಾಂಗ್ರೆಸ್ ಪಕ್ಷದ ಮುಖಂಡರಾದ ಅಶೋಕ ಪೂಜಾರಿ, ಡಾ. ಮಹಾಂತೇಶ ಕಡಾಡಿ, ಚಂದ್ರಶೇಖರ್ ಕೊಣ್ಣೂರ, ಅರವಿಂದ ದಳವಾಯಿ, ಸಿದ್ದಲಿಂಗ ದಳವಾಯಿ, ವಿವೇಕ್ ಜತ್ತಿ, ಯಲ್ಲಪ್ಪ ಪೂಜಾರಿ, ಗಂಗಾದರ ಬಡಕುಂದ್ರಿ, ಬಸನಗೌಡ ಪಾಟೀಲ್ ಹೊಳೆಯಾಂಚಿ, ಮಾರುತಿ ವಿಜಯನವರ್, ಕೆಪಿಸಿಸಿ ಸದಸ್ಯ ಪ್ರೇಮಾ ಚಿಕ್ಕೋಡಿ, ಕೆಪಿಸಿಸಿ ಸಂಯೋಜಕಿ ಜಿ ಪಲ್ಲವಿ ಸೇರಿದಂತೆ ಸಾವಿರಾರು ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಗೋಕಾಕ ನಗರದ ಸುತ್ತಮುತ್ತಲಿನ ಜನರ ಭಾಗವಹಿಸಿದ್ದರು.

# ರಾಕ್ಷಸ ಪ್ರವೃತ್ತಿ ಪ್ರಜ್ವಲ್ ಬೆನ್ನಿಗೆ ನಿಂತವರು ಯಾರು..?: ಸುಪ್ರೀಯಾ ಶ್ರೀನೇಟ್ ವಾಗ್ದಾಳಿ

ಬೆಳಗಾವಿ: ಪ್ರಜ್ವಲ್ ರೇವಣ್ಣ ಅಶ್ಲೀಲ್ ವಿಡಿಯೋ ಆರು ತಿಂಗಳ ಮೊದಲೇ ಸುಳಿದಾಡಿದರು ಮೈತ್ರಿಕೂಟದಿಂದ ಟಿಕೆಟ್ ಯಾಕೆ ನೀಡಿದರು. ಈ ಪ್ರಕಣದ ಬಗ್ಗೆ ಪ್ರಧಾನಿ ಮೋದಿ, ಶಾ ಮೌನಕ್ಕೆ ಶರಣಾಗಿರುವುದು ಯಾಕೆ ? ಪ್ರಜ್ವಲ್ ಗೆ ಬೆನ್ನಿಗೆ ನಿಂತವರು ಯಾರು.. ? ಎಂದು ಎಐಸಿಸಿ ರಾಷ್ಟ್ರೀಯ ಕಾಂಗ್ರೆಸ್ ವಕ್ತಾರೆ ಸುಪ್ರೀಯಾ ಶ್ರೀನೆಟ್ ಮೈತ್ರಿಕೂಟಕ್ಕೆ ಪ್ರಶ್ನೆಗಳ ಸುರಿಮಳೆ ಗೈದರು.

ಇಲ್ಲಿನ ಖಾಸಗಿ ಹೋಟೆಲ್ ನಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ನಾಯಕರಿಗೆ ಹಾಗೂ ಪ್ರಧಾನಿ ಮೋದಿಯವರಿಗೆ ಪ್ರಜ್ವಲ್ ರೇವಣ್ಣ ಮಾಡಿರುವ ಕೃತ್ಯದ ಬಗ್ಗೆ ಮಾಹಿತಿ ಇತ್ತು ಆದರೂ, ಹಾಸನ ಟಿಕೆಟ್ ನೀಡಿ ಮೈಸೂರಿನಲ್ಲಿ ಬಿಜೆಪಿ ಸಮಾವೇಶದಲ್ಲಿ ಪ್ರಜ್ವಲ್ ರೇವಣ್ಣನ ಬೆನ್ನು ತಟ್ಟಿ ಮತ ನೀಡುವಂತೆ ಯಾವ ಮುಖ ಇಟ್ಟುಕೊಂಡು ಮತಯಾಚನೆ ಮಾಡಿದರು ಎಂದು ಪ್ರಶ್ನಿಸಿದರು.



ಮಹಿಳೆಯರ ಸ್ವಾಭಿಮಾನ ಮತ್ತು ಅವರ ಸುರಕ್ಷತೆ ಅಪಾಯದಲ್ಲಿದೆ. ಸಾವಿರಾರು ಮಹಿಳೆಯರ ಮೇಲೆ ದೌರ್ಜನ್ಯ ನಡೆದಿದೆ ಪ್ರಜ್ವಲ್ ಬಗ್ಗೆ ಪ್ರಧಾನಿ ಮೋದಿಯವರು ಚಕಾರವೆತ್ತಲಿಲ್ಲ, ಅವರ ಬೆನ್ನಿಗೆ ನಿಂತವರು ಯಾರು ಎಂದು ಆಕ್ರೋಶ ಹೊರಹಾಕಿದರು. ಪ್ರಜ್ವಲ್ ರೇವಣ್ಣನ ಪ್ರಕರಣದ ಕುರಿತು ಯಾವ ಕೇಂದ್ರ ಸಚಿವರು ಮಾತನಾಡದೆ ಇರುವುದು ವಿಪರ್ಯಾಸದ ಸಂಗತಿ ಎಂದರು.

ರಾಕ್ಷಸ ಪ್ರವೃತ್ತಿ ಇರುವ ಜೆಡಿಎಸ್ ಪಕ್ಷದ ಜತೆ ಸಮ್ಮಿಲನ ಮಾಡಿಕೊಂಡಿರುವ ಮೋದಿ ಅವರು ಇದಕ್ಕೆ ಉತ್ತರ ನೀಡಬೇಕಿದೆ. ಪ್ರಧಾನಿ ಮೋದಿಯವರ ಅಭಿವೃದ್ಧಿ ಬಗ್ಗೆ ಹೊಗಳಿಕೊಳ್ಳುತ್ತಾರೆ ಆದರೆ, ಸಾವಿರಾರು ಮಹಿಳೆಯರ ಮಾನ ಹಾನಿಯಾಗಿದೆ. ಇದೇನಾ ಬಿಜೆಪಿ ಬದ್ಧತೆ ಎಂದು ಚಾಟಿ ಬೀಸಿದರು.

ದೇಶದಲ್ಲಿ ಮಹಿಳೆಯರಿಗೆ ಭದ್ರತೆ ಇಲ್ಲದಾಗಿದೆ. ಜೆಡಿಎಸ್ ಜತೆ ಕೈ ಜೋಡಿಸಿದ ಬಿಜೆಪಿಗರಿಗೆ ಇರುವ ಕೈಯನ್ನು ಹೇಗೆ ಇಟ್ಟಕೊಳ್ಳಬೇಕು ಎಂದು ಅರಿವು ಬೇಡವಾ..! ಮಹಿಳೆಯರ ಬಗ್ಗೆ ಅಪಾರ ಇದೆ ಬೃಹತ್ತ ಭಾಷಣ ಬಿಗಿಯುವ ಮೋದಿಯರಿಗೆ ಮೈತ್ರಿಕೊಟದ ಕೈಯನ್ನು ಹೇಗೆ ಭದ್ರತೆ ಇಟ್ಟಕೊಳ್ಳಬೇಕು ಎಂದು ಗೋತ್ತಿಲ್ಲವಾ ನಿಮ್ಮ ಮೈತ್ರಿಕೊಟದ ಸಂಸದ “ಕೈ “ ಸಾವಿರಾರು ಮಹಿಳೆ ಮಾನ ತೆಗೆದಿದೆ ಇದಕ್ಕೇನು ಹೇಳುತ್ತಿರಿ ಪ್ರಧಾನಿ ಮೋದಿಯವರೆ ಎಂದು ಪ್ರಶ್ನಿಸಿದರು.

ಹಾಸನ ಜಿಲ್ಲೆಯ ಜೆಡಿಎಸ್ ಶಾಸಕರಾದ ದೇವರಾಜ್ ಗೌಡ, ಕಳೆದ ಡಿಸೆಂಬರ್ ನಲ್ಲೇ ಈ ವಿಷಯವನ್ನು ಪ್ರಧಾನಿ ಮತ್ತು ಕೇಂದ್ರ ಗೃಹ ಸಚಿವರ ಗಮನಕ್ಕೆ ತಂದು, ಹಲವು ದಾಖಲೆಗಳನ್ನೂ ನೀಡಿ ಪ್ರಜ್ವಲ್ ಗೆ ಟಿಕೆಟ್ ನೀಡಬಾರದೆಂದು ವಿನಂತಿಸಿದ್ದರು ಎಂದು ತಿಳಿಸಿದರು.

ಪ್ರಜ್ವಲ್ ನ ವಿಡಿಯೋಗಳು ಈಗಿನದಲ್ಲ, ನಾಲ್ಕು ವರುಷಗಳ ಹಿಂದಿನದು ಎಂದು ಅವರ ತಂದೆ ರೇವಣ್ಣ ಹೇಳಿದಕ್ಕೆ ಪ್ರತಿಕ್ರಿಯಿಸಿದ ಅವರು ಯಾವಾಗಲೇ ಮಾಡಿದ್ದರು ಅದು ತಪ್ಪೇ. ಅಕ್ಷಮ್ ಅಪರಾಧ. ವಿಡಿಯೋ ಬಿಡುಗಡೆಯಿಂದ ಸಾವಿರಾರು ಮಹಿಳೆಯರ ಬದುಕು ಆತಂಕಕ್ಕೊಳಗಾಗಿದೆ. ನಿಜವಾಗಿಯೂ ಆತಂಕಗೋಳಗಾಗಬೇಕಾದವನು ಪ್ರಜ್ವಲ್ ಮತ್ತು ಅವರ ತಂದೆ. ಅಪ್ಪ, ಮಗ ಇಬ್ಬರೂ 16 ವರುಷದ ಬಾಲಕಿ ಸೇರಿದಂತೆ 63- ವರುಷದ ಮಹಿಳೆಯವರೆಗೂ ಬಿಟ್ಟಿಲ್ಲ. ಅವರ ಮೋಸಕ್ಕೆ ದೌರ್ಜನ್ಯಕ್ಕೋಳಗಾದ ಯಾವ ಮಹಿಳೆಯರು ಕೆಟ್ಟ ನಿರ್ಧಾರ ತೆಗೆದುಕೊಳ್ಳಬಾರದು ಎಂದು ಅವರು ವಿನಂತಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಸಚಿವ ಡಾ.ಸುಧಾಕರ್ , ಶಾಸಕರಾದ ರಾಜು ಸೇಠ, ವಿನಯ ಕುಲಕರ್ಣಿ, ಶಾಸಕಿ ನಯನಾ ಮೋಟಮ್ಮ , ಬೂಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ ಹಾಗೂ ಇತರರು ಇದ್ದರು.

## ಪ್ರೀಮಿಯರ್ ಎನರ್ಜಿಸ್ ಲಿಮಿಟೆಡ್ 1500 ಕೋಟಿ ರೂ ಸಂಗ್ರಹಿಸಲು ಪ್ರಸ್ತಾವನೆ ಸಲ್ಲಿಕೆ

ಹುಬ್ಬಳ್ಳಿ: ಪ್ರೀಮಿಯರ್ ಎನರ್ಜಿಸ್ ಲಿಮಿಟೆಡ್, ಭಾರತದ ಎರಡನೇ ಅತಿ ದೊಡ್ಡ ಇಂಟಿಗ್ರೇಟೆಡ್ ಸೌರ ಕೋಶ ಮತ್ತು ಸೌರ ಮಾಡ್ಯೂಲ್ ತಯಾರಕರು ಫ್ರಾಸ್ಟ್ ಮತ್ತು ಸುಲ್ಲಿವಾನ್ ವರದಿಯ ಪ್ರಕಾರ, ಮಾರ್ಚ್ 31, 2024 ರಂತೆ, ಪ್ರಾಥಮಿಕ ಸಾರ್ವಜನಿಕ ಕೊಡುಗೆ ಮೂಲಕ 1500 ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣ ಸಂಗ್ರಹಿಸಲು ಬಂಡವಾಳ ಮಾರುಕಟ್ಟೆ ನಿಯಂತ್ರಕ ಸೆಬಿಗೆ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಸಲ್ಲಿಸಿದೆ.

ಹೈದರಾಬಾದ್ ಮೂಲದ ಕಂಪನಿಯ ಆರಂಭಿಕ ಸಾರ್ವಜನಿಕ ಕೊಡುಗೆ ಮೂಲಕ 2,82,00,000 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡುವ ಷೇರುದಾರರಿಂದ ಒಟ್ಟು 1500 ಕೋಟಿ ರೂಪಾಯಿ ಸಂಗ್ರಹಕ್ಕೆ ಮುಂದಾಗಿದೆ.

1995ರಲ್ಲಿ ಅಧ್ಯಕ್ಷ ಮತ್ತು ಪೂರ್ಣಕಾಲಿಕ ನಿರ್ದೇಶಕರಾದ ಸುರೇಂದರ್ ಪಾಲ್ ಸಿಂಗ್ ಸಲುಜಾ ಅವರು ಸ್ಥಾಪಿಸಿದ ಪ್ರೀಮಿಯರ್ ಎನರ್ಜಿಸ್ ಲಿಮಿಟೆಡ್, ಹೊಸ ಸಂಚಿಕೆಯ ನಿವ್ವಳ ಆದಾಯ 1168 ಕೋಟಿ ರೂಪಾಯಿಗಳನ್ನು ತನ್ನ ಅಂಗಸಂಸ್ಥೆಯಾದ ಪ್ರೀಮಿಯರ್ ಎನರ್ಜಿಸ್ ಗ್ಲೋಬಲ್ ಎನ್ವಿರಾನ್ಮೆಂಟ್ ಪ್ರೈವೇಟ್ ಲಿಮಿಟೆಡ್ ನಲ್ಲಿ 4 ಜಿಡಬ್ಲ್ಯು ಸೋಲಾರ್ ಪಿವಿ ಟಾಪ್‌ಕಾನ್ ಸೆಲ್ ಮತ್ತು 4 ಜಿಡಬ್ಲ್ಯು ಸೋಲಾರ್ ಪಿವಿ ಟಾಪ್‌ಕಾನ್ ಮಾಡ್ಯೂಲ್ ಉತ್ಪಾದನಾ ಸೌಲಭ್ಯವನ್ನು ಹೈದರಾಬಾದ್, ತೆಲಂಗಾಣದಲ್ಲಿ ಸ್ಥಾಪಿಸಲು ಭಾಗಶಃ ಹಣಕಾಸು ಒದಗಿಸಲು ಮತ್ತು ಉಳಿದವು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಪ್ರಸ್ತಾವಿಸಿದೆ.

ಸೌರ ಪಿವಿ ಸೆಲ್ಗಳು ಮತ್ತು ಸೌರ ಮಾಡ್ಯೂಲ್ಗಳ ಉತ್ಪಾದನೆ, ಇಪಿಸಿ ಯೋಜನೆಗಳ ಅನುಷ್ಠಾನ, ಸ್ವತಂತ್ರ ವಿದ್ಯುತ್ ಉತ್ಪಾದನೆ, ಕಂಪನಿಯು ಕಾರ್ಯಗತಗೊಳಿಸಿದ ಇಪಿಸಿ ಯೋಜನೆಗಳಿಗೆ ಸಂಬಂಧಿಸಿದಂತೆ ಒ & ಎಂ ಸೇವೆಗಳು ಮತ್ತು ಇತರ ಸೌರ ಸಂಬಂಧಿತ ಉತ್ಪನ್ನಗಳ ಮಾರಾಟದಲ್ಲಿ ತೊಡಗಿರುವ ಕಂಪನಿಯು ಐಪಿಪಿಗಳು, ಒಇ-ಎಂಗಳು ಮತ್ತು ಎನ್ಟಿಪಿಸಿ, ಟಾಟಾ ಪವರ್ ಸೋಲಾರ್ ಸಿಸ್ಟಮ್ಸ್ ಲಿಮಿಟೆಡ್, ಪ್ಯಾನಾಸಾನಿಕ್ ಲೈಫ್ ಸೊಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್, ಕಂಟಿನ್ಯೂಮ್ ಗ್ರೀನ್ ಎನರ್ಜಿ (ಇಂಡಿಯಾ) ಪ್ರೈವೇಟ್ ಲಿಮಿಟೆಡ್, ಶಕ್ತಿ ಪಂಪ್ಸ್ (ಇಂಡಿಯಾ) ಲಿಮಿಟೆಡ್, ಫಸ್ಟ್ ಎನರ್ಜಿ 6 ಪ್ರೈವೇಟ್ ಲಿಮಿಟೆಡ್ (ಥರ್ಮ್ಯಾಕ್ಸ್ ಗ್ರೂಪ್ ಕಂಪನಿ) ಲುಮಿನಸ್ ಪವರ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್, ಹಾರ್ಟೆಕ್ ಸೋಲಾರ್ ಪ್ರೈವೇಟ್ ಲಿಮಿಟೆಡ್, ಗ್ರೀನ್ ಇನ್ಫ್ರಾ ವಿಂಡ್ ಎನರ್ಜಿ ಲಿಮಿಟೆಡ್ (ಸೆಂಬ್ಕಾರ್ಪ್ ಗ್ರೀನ್ ಇನ್ಫ್ರಾ ಲಿಮಿಟೆಡ್ ನ ಅಂಗಸಂಸ್ಥೆ) ಇತ್ಯಾದಿಗಳಲ್ಲಿ ಗ್ರಾಹಕರನ್ನು ಹೊಂದಿದೆ.

ತೆಲಂಗಾಣದ ಹೈದರಾಬಾದ್ ನಲ್ಲಿರುವ ಕಂಪನಿಯ ಒಡೆತನದ ಭೂಮಿಯಲ್ಲಿ ನೆಲೆಗೊಂಡಿರುವ ಐದು ಉತ್ಪಾದನಾ ಸೌಲಭ್ಯಗಳನ್ನು ಹೊಂದಿರುವ ಪ್ರೀಮಿಯರ್ ಎನರ್ಜಿ, ಡಿಸೆಂಬರ್ 31,2023 ಕ್ಕೆ ಕೊನೆಗೊಂಡ ಒಂಬತ್ತು ತಿಂಗಳುಗಳಲ್ಲಿ ಯುನೈಟೆಡ್ ಸ್ಟೇಟ್ಸ್ ಗೆ ಸೌರ ಕೋಶಗಳನ್ನು ರಫ್ತು ಮಾಡುವ ಅತಿದೊಡ್ಡ ಭಾರತೀಯ ಸಂಸ್ಥೆಯಾಗಿದೆ. ಕಾರ್ಯಾಚರಣೆಯಿಂದ ಕಂಪನಿಯ ಆದಾಯವು 2021 ರ ಹಣ-ಕಾಸು ವರ್ಷ ದಿಂದ 2023 ರ ಹಣಕಾಸು ವರ್ಷದವರೆಗೆ ಸಂಯೋಜಿತ ವಾರ್ಷಿಕ ಬೆಳವಣಿಗೆಯ ದರದಲ್ಲಿ (ಸಿಎಜಿಆರ್) 42.71% ನಷ್ಟು ಹೆಚ್ಚಾಗಿದೆ. 2023 ರ ಹಣಕಾಸು ವರ್ಷದ ಹೊತ್ತಿಗೆ ಅದರ ಕಾರ್ಯಾಚರಣೆಗಳ ಆದಾಯವು ರೂ. 1, 428 ಕೋಟಿ ರೂ. ಆಗಿದ್ದು 2023 ರ ಡಿಸೆಂಬರ್ 31 ಕ್ಕೆ ಕೊನೆಗೊಂಡ ಒಂಬತ್ತು ತಿಂಗಳ ಅವಧಿಗೆ 2,017 ಕೋಟಿ ರೂ. ಆಗಿದೆ. ಮಾರ್ಚ್ 15,2024 ರ ಹೊತ್ತಿಗೆ, ಕಂಪನಿಯು ರೂ. 5, 362 ಕೋಟಿ ರೂಪಾಯಿಗಳ ಆದೇಶವನ್ನು ಹೊಂದಿದೆ. ಕೋಟಕ್ ಮಹೀಂದ್ರಾ ಕ್ಯಾಪಿಟಲ್ ಕಂಪನಿ ಲಿಮಿಟೆಡ್, ಜೆಪಿ ಮಾರ್ಗನ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಮತ್ತು ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್ ಈ ವಿತರಣೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್ ಗಳಾಗಿವೆ.

## ಧಾರ್ಮಿಕ ಕೇಂದ್ರದಲ್ಲಿ ಧಾಂದಲೆ : ಸ್ವಾಮೀಜಿಗೆ ಅವಮಾನ



ಹುಕ್ಕೇರಿ: ಪಟ್ಟಣದ ಹೊರವಲಯದ ಧಾರ್ಮಿಕ ಕೇಂದ್ರವೊಂದರಲ್ಲಿ ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳಕರ ಮತ್ತವರ ಕಾರ್ಯಕರ್ತರು ಸೋಮವಾರ ಧಾಂದಲೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ. ಇದೇ ವೇಳೆ ಈ ಚುನಾವಣಾ ಪ್ರಚಾರಾರ್ಥ ಕಾರ್ಯಕರ್ತರು ಸ್ವಾಮೀಜಿ ಮೇಲೂ ಹಲ್ಲೆಗೆ ಯತ್ನ ನಡೆಸಿದ್ದಾರೆ ಎಂದು ಗೊತ್ತಾಗಿದೆ.

ಇಲ್ಲಿನ ಕ್ಯಾರಗುಡ್ ಬಳಿಯ ಇಂಚಗೇರಿ ಸಂಪ್ರದಾಯದ ಅವುಜೀಕರ ಆಶ್ರಮದಲ್ಲಿ ಏಕಾಏಕಿ ನುಗ್ಗಿದ ಕಲ್ಲೋಳಕರ ಹಾಗೂ ಅವರ ಬೆಂಬಲಿತ ಕಾರ್ಯಕರ್ತರು ವಿಚಿತ್ರವಾಗಿ ವರ್ತಿಸಿದ್ದಾರೆ ಎನ್ನಲಾಗಿದೆ. ಈ ಸಂದರ್ಭದಲ್ಲಿ ಗೂಂಡಾವರ್ತನೆ ತೋರಿದ ಚುನಾವಣಾ ಪ್ರಚಾರಾಥ-ರ್ ಕಾರ್ಯಕರ್ತರು ಆಶ್ರಮದ ಸ್ವಾಮೀಜಿಗಳ ಮೈಮೇಲೂ ಎರಗಿ ಆವಾಜ್ ಹಾಕಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಆಶ್ರಮದ ಮಲ್ಲಯ್ಯಾ ಸ್ವಾಮೀಜಿ, ಅಭಿನವ ಮಂಜುನಾಥ ಸ್ವಾಮೀಜಿಗಳನ್ನು ಏಕವಚನದಲ್ಲೇ ಸಂಬೋಧಿಸಿ ಅವಮಾನಿಸಲಾಗಿದೆ ಎಂಬ ಆರೋಪಗಳು ಕೇಳಿ ಬಂದಿವೆ. ಶ್ರೀಮಠದಲ್ಲಿ ನಡೆದಿರುವ ದಾಂಧಲೆ ದುಷ್ಕೃತ್ಯವನ್ನು ನಾಡಿನ ಅನೇಕ ಶ್ರೀಗಳು ಖಂಡಿಸಿ, ಧಾರ್ಮಿಕ ಪರಂಪರೆ ಅಪಮಾನಿಸಿದವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಯಾವುದೇ ಮುನ್ಸೂಚನೆ ನೀಡದೇ ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳಕರ ಅವರು ತಮ್ಮ ಕಾರ್ಯಕರ್ತರೊಂದಿಗೆ ಆಶ್ರಮಕ್ಕೆ ಬಂದಿದ್ದಾರೆ. ದೇವಸ್ಥಾನದೊಳಗೆ ಕಲ್ಲೋಳಕರ ದರ್ಶನ ಪಡೆದು ಹೊರಬರುಷ್ಟರಲ್ಲೇ ಅವರ ಬೆಂಬಲಿತ ಮತ್ತಷ್ಟು ಕಾರ್ಯಕರ್ತರು ಬೈಕ್ ಮತ್ತು ವಾಹನಗಳ ಸಮೇತ ಮಠದ ಆವರಣದೊಳಗೆ ನುಗ್ಗಿ ಕೇಕೆ ಹಾಕಿ ವಿಚಿತ್ರವಾಗಿ ವರ್ತಿಸಿದ್ದಾರೆ ಎಂದು ಹೇಳಲಾಗಿದೆ.

ಈ ವೇಳೆ ಸ್ವಾಮೀಜಿ-ಶಿಷ್ಯಂದಿರು ಹಾಗೂ ಕಲ್ಲೋಳಕರ ಕಾರ್ಯಕರ್ತರ ನಡುವೆ ಮಾತಿಗೆ ಮಾತು ಬೆಳೆದು ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿದೆ. ಒಂದು ಹಂತದಲ್ಲಿ ತಾಳ್ಮೆ ಕಳೆದುಕೊಂಡ ಶ್ರೀಮಠದ ಮಲ್ಲಯ್ಯಾ ಸ್ವಾಮೀಜಿಯೂ ಸಹಿತ ಕಾರ್ಯಕರ್ತರತ್ತ ಕಲ್ಲು ಎಸೆದಿದ್ದಾರೆ ಎನ್ನಲಾಗಿದೆ. ಈ ವೇಳೆ ಪರಿಸ್ಥಿತಿ ವಿಕೋಪಕ್ಕೆ ಹೋಗುವುದನ್ನು ಅರಿತ ಕೆಲವರು ಮಧ್ಯಸ್ಥಿಕೆ ವಹಿಸಿ ಪರಿಸ್ಥಿತಿಯನ್ನು ತಿಳಿಗೊಳಿಸಿದ್ದಾರೆ.

ಸುದ್ದಿ ತಿಳಿದು ಸ್ಥಳಕ್ಕೆ ಧಾವಿಸಿದ ಪೊಲೀಸರು ಪರಿಸ್ಥಿತಿ ಕುರಿತು ಮಾಹಿತಿ ಕಲೆ ಹಾಕಿದ್ದಾರೆ. ಇದೇ ವೇಳೆ ಮಾಜಿ ಸಚಿವ ಶಶಿಕಾಂತ ನಾಯಿಕ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ನಾಯಕರು ಭೇಟಿ ಮಾಡಿ ಸ್ವಾಮೀಜಿಗೆ ಧೈರ್ಯ ತುಂಬಿದ್ದಾರೆ. ಈ ಕುರಿತು ತಡರಾತ್ರಿವರೆಗೂ ಪ್ರಕರಣ ದಾಖಲಾಗಿಲ್ಲ.

## ಹಾಟ್ ಏರ್ ಬಲೂನ್ ಹಾರಾಟದ ಮೂಲಕ ಮತದಾನ ಜಾಗೃತಿ

ಬೆಳಗಾವಿ: ನಗರದ ಸರ್ದಾರ್ ಹೈಸ್ಕೂಲ್ ಮೈದಾನದಲ್ಲಿ (ಏ.30) ರಂದು ಬೆಳಗ್ಗೆ 8 ಗಂಟೆಗೆ ಮತದಾನದ ಜಾಗೃತಿಗಾಗಿ ಹಾಟ್ ಏರ್ ಬಲೂನ್ ಹಾರಾಟ ಹಾಗೂ ಬೆಳಗಾವಿ ಜಿಲ್ಲೆ ಮತದಾನ ಜಾಗೃತಿ ಮಾಸ್ಕಾಟ ಅನಾವರಣ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಚಾಲನೆ ನೀಡಿದರು.



ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಚಿಕ್ಕೋಡಿ, ಬೆಳಗಾವಿ ಲೋಕಸಭಾ ಮತ ಕ್ಷೇತ್ರಗಳ ಚುನಾವಣೆ ಮೇ.07 ರಂದು ನಡೆಯಲಿದೆ. ಬೆಳಿಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಮತದಾನದ ಸಮಯ ನಿಗದಿ ಪಡಿಸಲಾಗಿದೆ.

ಎಲ್ಲ ಮತದಾರರು ಕಡ್ಡಾಯವಾಗಿ ಮತ ಚಲಾಯಿಸಬೇಕು ಮತದಾರರಿಗೆ ಮತ್ತುಷ್ಟು ಮಾಹಿತಿ ನೀಡಲು ಸ್ವೀಪ್ ಕಾರ್ಯಕ್ರಮದಡಿ ಹಾಟ್ ಏರ್ ಬಲೂನ್ ಹಾರಾಟ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಯಾರು ಕೂಡ ಮತದಾನದಿಂದ ಹೊರಗುಳಿಯಬಾರದೆಂದು ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಮತ ಕ್ಷೇತ್ರಗಳಲ್ಲಿ ಮತದಾರರ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಜಿಲ್ಲೆಯ ರಾಣಿ ಚನ್ನಮ್ಮ ಪ್ರಾಣಿ ಸಂಗ್ರಾಲಯದಲ್ಲಿರುವ ಶೌರ್ಯ (ಹುಲಿ) ಜಿಲ್ಲೆಯ ಮತದಾನ ಜಾಗೃತಿ ಮಾಸ್ಕಾಟಾಗಿ ಮಾಡಲಾಗಿದೆ ಎಂದು ಚಿಕ್ಕೋಡಿ ಲೋಕಸಭಾ ಮತ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ಶಿಂಧೆ ಅವರು ತಿಳಿಸಿದರು

ಉಪ-ಪೊಲೀಸ್ ಆಯುಕ್ತರಾದ ರೋಹನ್ ಜಗದೀಶ್, ಜಿಪಂ ಯೋಜನಾ ನಿರ್ದೇಶಕ ಎಂ.ಕೃಷ್ಣರಾಜು, ಜಿಪಂ ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ್, ಮುಖ್ಯ ಲೆಕ್ಕಾಧಿಕಾರಿ ಪರಶುರಾಮ ದುಡಗುಂಡಿ, ಜಿಪಂ. ಲೆಕ್ಕಾಧಿಕಾರಿ ಗಂಗಾ ಹಿರೇಮಠ್ ಮಹಾನಗರ ಪಾಲಿಕೆ ಆಯುಕ್ತ ಲೋಕೇಶ ಎನ್ ಮೊದಲಾದವರು ಇತರೆ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು ಭಾಗವಹಿಸಿದ್ದರು.

# ಪ್ರಧಾನಿ ಮೋದಿ ಸ್ವಚ್ಛ ಭಾರತ ಎಲ್ಲಿಯೂ ಕಾಣುತ್ತಿಲ್ಲ; ಕಂಡಲ್ಲಿ ಕಸ ಮಾತ್ರ ಕಾಣುತ್ತಿದೆ: ಡಾ. ತೇಜಸ್ವಿನಿ ಗೌಡ

ಚಿಕ್ಕೋಡಿ: ಪ್ರಧಾನಿ ಮೋದಿಯವರ ಸ್ವಚ್ಛ ಭಾರತ ಎಲ್ಲಿಯೂ ಕಾಣುತ್ತಿಲ್ಲ. ಕಂಡ ಕಂಡಲ್ಲಿ ಕಸ ಮಾತ್ರ ಕಾಣುತ್ತಿದೆ. ಇನ್ನು ಚಿಕ್ಕೋಡಿ ಲೋಕಸಭೆ ಕ್ಷೇತ್ರಕ್ಕೆ ಹಾಲಿ ಬಿಜೆಪಿ ಸಂಸದ ಅಣ್ಣಾಸಾಹೇಬ್ ಜೊಲ್ಲೆ ಅವರ ಕೊಡುಗೆ ಏನೆಂದು ನೀವೆಲ್ಲರೂ ಪ್ರಶ್ನಿಸಬೇಕೆಂದು ಮಾಜಿ ವಿಧಾನ ಪರಿಷತ್ ಸದಸ್ಯ, ಕಾಂಗ್ರೆಸ್ ಪಕ್ಷದ ವಕ್ತಾರೆ ಡಾ. ತೇಜಸ್ವಿನಿ ಗೌಡ ತಿಳಿಸಿದರು.

ಚಿಕ್ಕೋಡಿ ಲೋಕಸಭೆ ಕ್ಷೇತ್ರದ ನಾಗರಮುನ್ನೊಳ್ಳಿಯಲ್ಲಿ ಸಾರ್ವಜನಿಕ ಸಭೆ, ಕರೋಶಿ ಗ್ರಾಮದಲ್ಲಿ ರೋಡ್ ಶೋ ನಡೆಸಿ, ಮತಯಾಚಿಸಿದ ನಂತರ ನಡೆದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ಪ್ರಚಾರಾರ್ಥವಾಗಿ ಹಮ್ಮಿಕೊಂಡಿದ್ದ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ರಸ್ತೆಗಳಲ್ಲಿ, ಗ್ರಾಮಗಳಲ್ಲಿ ಕಂಡ ಕಂಡಲ್ಲಿ ಕಸ ಮಾತ್ರ ಕಾಣುತ್ತಿಲ್ಲ. ಈ ಬಿಜೆಪಿಯವರು ಜನರ ಮನಸಲ್ಲಿಯೂ ಕಸ ತುಂಬಿದ್ದಾರೆ. ಇದು ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿರುವ ನಾಡು, ಈ ನಾಡಲ್ಲಿ ಜನರ ಮನಸಲ್ಲಿ ಕಸ ತುಂಬಲು ನಾವು ಬಿಡೋದಿಲ್ಲ ಎಂದರು.

ಬಿಜೆಪಿಯವರಂತೆ ಅಧರ್ಮದ ರಾಜ-ಕೀಯವನ್ನು ಕಾಂಗ್ರೆಸ್ ಪಕ್ಷ ಯಾವತ್ತು ಮಾಡೋದಿಲ್ಲ. ನಾವು ಲೋಕಸಭೆ ಚುನಾವಣೆ ಇಷ್ಟೊಂದು ಪ್ರತಿಷ್ಠೆಯಾಗಿ ತೆಗೆದುಕೊಂಡಿರುವುದು ಕರ್ನಾಟಕದ ಮಾಡೆಲ್ ಅನ್ನು ದೇಶದಲ್ಲಿ ತರುವುದಕ್ಕಾಗಿ, ಅದಕ್ಕಾಗಿ ಚಿಕ್ಕೋಡಿ ಕ್ಷೇತ್ರದಿಂದ ಪ್ರಿಯಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಬಡವರಿಗೆ ಚಿನ್ನ ಕೊಟ್ಟರೆ ತಿನ್ನಲು ಆಗಲ್ಲ. ಅನ್ನ ಕೊಟ್ಟರೆ ತಿನ್ನುತ್ತಾರೆ. ಅದಕ್ಕೆ ಸಿಎಂ ಸಿದ್ದರಾಮಯ್ಯನವರು ನಿಮಗೆಲ್ಲ 10 ಕೆಜಿ ಅಕ್ಕಿ ನೀಡುವ ಮೂಲಕ ಅನ್ನರಾಮಯ್ಯ ಅನಿಸಿಕೊಂಡಿದ್ದಾರೆ. ಕುರುಬ ಸಮಾಜವನ್ನು ಬೆಳೆಸಲು ಬಿಜೆಪಿಯವರಿಗೆ ಇಷ್ಟವಿಲ್ಲ. ಅದಕ್ಕಾಗಿಯೇ ಈಶ್ವಪ್ಪ ಅವರನ್ನು ಬಿಜೆಪಿಯಿಂದ ಉಚ್ಚಾಟಿಸಿದ್ದಾರೆ. ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಗ್ಗೆ



ದ್ವೇಷ ಸಾಧಿಸುತ್ತಿರುವ ದೇವೇಗೌಡರನ್ನು ಪ್ರಧಾನಿ ಮಾಡಿದ್ದು ಕಾಂಗ್ರೆಸ್ ಪಕ್ಷವೇ, ಕಾಂಗ್ರೆಸ್ ಪಕ್ಷ ಈ ದೇಶದಲ್ಲಿ ಮತ್ತೆ ಅಧಿಕಾರಕ್ಕೆ ಬರಬೇಕು. ಗ್ಯಾರಂಟಿ ಯೋಜನೆ ಕೊಟ್ಟಾಗ ಬಿಜೆಪಿಯವರಿಗೆ ಹೊಟ್ಟೆ ಉರಿತು. ಶ್ರೀಮಂತರ ಭೂಮಿಯನ್ನು ಬಡವರಿಗೆ ಹಂಚಿದ್ದು ಕೂಡ ಕಾಂಗ್ರೆಸ್ ಪಕ್ಷವೇ ಎಂದು ತಿಳಿಸಿದರು.

ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮಾತನಾಡಿ, ಶ್ರೀ ಸಿದ್ದೇಶ್ವರ, ಬಸವೇಶ್ವರರ ಪಾದಕ್ಕೆ ನಮಿಸುತ್ತೇನೆ. ಮೇ 07 ರಂದು ನಡೆಯುವ ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಹೆಚ್ಚಿನ ಮತಗಳನ್ನು ನೀಡಿ ಬಹು ಅಂತರದಿಂದ ಗೆಲ್ಲಿಸುವ ಮೂಲಕ ಆಶೀರ್ವದಿಸಿ ಎಂದು ಮನವಿ ಮಾಡಿದರು.

ತಮ್ಮೆಲ್ಲರ ಆಶೀರ್ವಾದ ನಮ್ಮ ಮೇಲಿರಲಿ, ಭಾರತ ದೇಶದ ಪ್ರಗತಿಗಾಗಿ ಕಾಂಗ್ರೆಸ್ ಪಕ್ಷದ ಕೊಡುಗೆ ಅಪಾರವಾಗಿದೆ. ಚಿಕ್ಕೋಡಿ ಲೋಕಸಭೆಯಿಂದ ಒಂದೇ ಒಂದು ಬಾರಿ ನನಗೆ ಅವಕಾಶ ನೀಡಿ. ನಿಮ್ಮ ಸೇವೆಗೆ ಹಗಲಿರುಳು ಶ್ರಮಿಸುತ್ತೇನೆ. ತಂದೆ, ಸಚಿವ ಸತೀಶ್ ಜಾರಕಿಹೊಳಿ ಅವರ ಸಲಹೆ, ಸೂಚನೆ ಮೇರೆಗೆ ನಿಮ್ಮ ಭಾಗದ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಲು ಆದ್ಯತೆ ನೀಡುತ್ತೇನೆ ಎಂದರು.

ಕುರುಬ ಸಮಾಜದ ಹಿರಿಯ ಮುಖಂಡ ರಾಜೇಂದ್ರ ಸಣ್ಣಕ್ಕಿ ಮಾತನಾಡಿ, ಜಾರಕಿಹೊಳಿ ಸಹೋದರರು ಎಲ್ಲಾ ಸಮಾಜಗಳನ್ನು ಗೌರವಿಸುತ್ತಾರೆ. ಜಾರಕಿಹೊಳಿ ಮನೆತನಕ್ಕೆ ಯಾವುದೇ ಜಾತಿ ಇಲ್ಲ. ಇವತ್ತು ಅದೇ ಮನೆತನದ ಕುಡಿ ಪ್ರಿಯಂಕಾ ಜಾರಕಿಹೊಳಿ ಅವರು ಚಿಕ್ಕೋಡಿ ಕ್ಷೇತ್ರದಿಂದ ಸ್ಪರ್ಧಿಸಿದ್ದು, ಅವರನ್ನು ಬಹು ಅಂತರದಿಂದ ಗೆಲ್ಲಿಸಬೇಕೆಂದು ಕೋರಿದರು.

ಇದೇ ವೇಳೆ ನಾಗರಮುನ್ನೊಳ್ಳಿ ಹಲವು ಬಿಜೆಪಿ, ಜೆಡಿಎಸ್ ಕಾರ್ಯಕರ್ತರು ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಕರೋಶಿ ಗ್ರಾಮದಲ್ಲಿ ರೋಡ್ ಶೋ: ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಕರೋಶಿ ಗ್ರಾಮದಲ್ಲಿ ಭರ್ಜರಿ ರೋಡ್ ಶೋ ನಡೆಸಿ ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಕಾರ್ಯದರ್ಶಿ ಮಹಾವೀರ ಮೋಹಿತೆ, ಅರ್ಜುನ ನಾಯಕವಾಡಿ, ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷ ನಿರ್ಮಲಾ ಪಾಟೀಲ್, ಸಿದ್ದಪ್ಪ ಮರಾಯ, ರಾಜೇಂದ್ರ ಸಣ್ಣಕ್ಕಿ, ಲಕ್ಷ್ಮಣ ಮಸಗುಪ್ಪಿ, ಮುನೀರ ಕಾಟಿಪಳ್ಳ, ವಿನಾಯಕ ಕುಂಬಾರ, ಸಂಗೀತಾ ಮಾದರ, ರಾಜ್ಮಾ ಮುಸ್ಕಾನಿ, ಲಕ್ಷ್ಮಿ ಮರ್ಯಾಯಿ ಸೇರಿದಂತೆ ಸೇರಿದಂತೆ, ನಾಗರಮುನ್ನೊಳ್ಳಿ , ಕರೋಶಿ ಗ್ರಾಮದ ಹಿರಿಯರು, ಕಾರ್ಯಕರ್ತರು, ಮುಖಂಡರು, ಅಪಾರ ಸಂಖ್ಯೆಯಲ್ಲಿ ಮಹಿಳೆಯರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089